
ಯುವ ಸ್ಪೂರ್ತಿ



"ಶಿಕ್ಷಣವು ಸಹನೆ ಮತ್ತು ಸಮರ್ಥನ ಗುಣಗಳನ್ನು ಬೆಳೆಸಬಲ್ಲದ್ದು."
–ಸ್ವಾಮಿ ವಿವೇಕಾನಂದ

MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ : 205 | ಗುರುವಾರ : 29–05–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 205 | THURSDAY : 29–05–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ಮಳೆ ಹಾನಿ ಪ್ರದೇಶಕ್ಕೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಲು ಸಿಎಂ ಸೂಚನೆ

**ಬೆಂಗಳೂರು,ಮೇ29–** ರಾಜ್ಯದಲ್ಲಿ ಮಳೆಯಿಂದ ಹಾನಿಗೊಳಗಾಗಿರುವ ಪ್ರದೇಶಗಳಿಗೆ ತಕ್ಷಣ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದ್ದು, ಮಳೆ ಹಿನ್ನೆಲೆಯಲ್ಲಿ ಇದೇ ತಿಂಗಳ 30 ಮತ್ತು 31 ರಂದು ಎಲ್ಲಾ ಜಿಲ್ಲಾಧಿಕಾರಿಗಳು, ಜಿ.ಪಂ. ಸಿಇಓ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯನ್ನು ಕರೆದಿದ್ದಾರೆ.

ರಾಜ್ಯಾದ್ಯಂತ ಮಳೆ ಬಿರುಸಾಗಿರುವ ಹಿನ್ನೆಲೆಯಲ್ಲಿ ಮಳೆಯಿಂದ ಆಗಿರುವ ಅನಾಹುತಗಳ ಬಗ್ಗೆ ಇಂದು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ.

ಮಳೆಯಿಂದ ಹಾನಿಗೊಳಗಾಗಿರುವ ಪ್ರದೇಶಗಳಿಗೆ ತಕ್ಷಣವೇ ಜಿಲ್ಲಾ ಸಚಿವರು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸುವಂತೆಯೂ ತಾಕೀತು ಮಾಡಿದ್ದಾರೆ.

ಮಳೆ ಹೆಚ್ಚಾಗಿರುವ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸಹ ಜಿಲ್ಲೆಯಲ್ಲಿ ಮಳೆಯ ಬಗ್ಗೆ ನಿಗಾ ವಹಿಸಿ ಅನಾಹುತಗಳಾಗದಂತೆ ಕಟ್ಟೆಚ್ಚರ ವಹಿಸುವ ಜತೆಗೆ ಮಳೆಯಿಂದ ಆಗಿರುವ ಹಾನಿಗಳನ್ನು ಸರಿಪಡಿಸಲು ಸಮರೋಪಾದಿಯಲ್ಲಿ ಪರಿಹಾರ ಕಾರ್ಯಗಳನ್ನು

2ನೇ ಪುಟಕ್ಕೆ

## 'ಕಮಲ್ ಹಾಸನ್' ಚಿತ್ರ ಕರ್ನಾಟಕದಲ್ಲಿ ಬ್ಯಾನ್‌ಗೆ ಕರವೇ ಒತ್ತಾಯ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.29–** ತಮಿಳು ನಟ ಕಮಲ್ ಹಾಸನ್ ಅವರು ಕನ್ನಡ ಭಾಷೆಗೆ ಅವಹೇಳನ ಮಾಡಿದ್ದು, ತಮಿಳುನಿಂದಲೇ ಕನ್ನಡ ಭಾಷೆ ಬಂದಿದ್ದು. ನೀವು ಅದಕ್ಕೆ ತಲೆಬಾಗಲೇಬೇಕು ಎಂಬ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ ಆದ ಕಾರಣ ಅವರ ಚಿತ್ರ ಚಿತ್ರವನ್ನು ಕರ್ನಾಟಕದಲ್ಲಿ ಬ್ಯಾನ್ ಮಾಡಬೇಕು ಎಂದು ಕರವೇ ಕಾರ್ಯಕರ್ತರು ಸಹಾಯಕ ಆಯುಕ್ತರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಅವರ ಚಲನಚಿತ್ರವನ್ನು ಕರ್ನಾಟಕದಲ್ಲಿ ಬ್ಯಾನ್ ಮಾಡಬೇಕು. ಈಗಾಗಲೇ ಅವರು ನೂತನ ಸಿನೆಮಾ "ಥಂಗ್ ಲೈಫ್" ಚಿತ್ರ ಕರ್ನಾಟಕದಲ್ಲಿ ಯಾವ ಚಿತ್ರಮಂದಿರದಲ್ಲೂ ಬಿಡುಗಡೆ ಆಗಬಾರದು. ಒಂದು ವೇಳೆ ಅವರ ಚಿತ್ರವನ್ನು ಬಿಡುಗಡೆ ಮಾಡಿದಲ್ಲಿ ಉಗ್ರ ಹೋರಾಟವನ್ನು ಹಮ್ಮಿಕೊಳ್ಳಲಾಗುತ್ತದೆ ಎಂದು ಈ ಮನವಿ ಪತ್ರದ ಮೂಲಕ ಎಚ್ಚರಿಸಿದರು.



ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ಆಂಜನೇಯ ಭಂಡಾರಿ, ಭೀಮೇಶ ನಾಯಕ, ಕುರುಮೇಶ ನಾಯಕ, ಅಶೋಕ ನಾಯಕ, ಸಲೀಂ ಖಾನ್, ಶಿವುಪತ್ತಾರ, ಸಿದ್ದು ಚಲುವಾದಿ, ಅಭಿಷೇಕ ನಾಯಕ, ಮುತ್ತುರಾಜ್, ಪ್ರಸನ್ನ ನಾಯಕ, ವಿಜಯಕುಮಾರ್, ಯಲ್ಲಪ್ಪ ದೊಡ್ಡಮನಿ, ನಾಗರಾಜ ಗುತ್ತೇದಾರ, ಗದ್ದೆಪ್ಪ ಸೇರಿದಂತೆ ಇತರರು ಇದ್ದರು.


## ಅರ್ಹ ಫಲಾನುಭವಿಗಳು ಸರ್ಕಾರದ ಸೌಲಭ್ಯ ಪಡೆಯಿರಿ: ಸಂಜಯ್ ಜಾಗೀರದಾರ್

ಯುವ ಮಾರ್ಗ ಸುದ್ದಿ

**ರಾಯಚೂರು,ಮೇ.29–**ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಜಿಲ್ಲೆಯ ಪ್ರತಿಯೊಬ್ಬ ಅರ್ಹ ಫಲಾನುಭವಿಗಳು ಪಡೆಯಬೇಕೆಂದು ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾದ ಸಂಜಯ್ ಜಾಗೀರದಾರ್ ಅವರು ಹೇಳಿದರು.

ಬುಧವಾರ ದಂದು ನಗರದ ಪತ್ರಿಕಾ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜ್ಯದ ವಿವಿಧ ನಿಗಮಗಳಿಂದ ಅನೇಕ ಸೇವೆ, ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಅಲ್ಪಸಂಖ್ಯಾತರ ಕಚೇರಿ ಸೇರಿದಂತೆ ನಿಗಮಕ್ಕೆ ಭೇಟಿ ನೀಡಿ ಯೋಜನೆ, ಸೌಲಭ್ಯಗಳ ಕುರಿತು ಮಾಹಿತಿ ಪಡೆಯಬೇಕು. ಅವುಗಳ ಸದುಪಯೋಗ ಪಡೆದುಕೊಳ್ಳಬೇಕು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿವಿಧ ಸೌಲಭ್ಯ ಯೋಜನೆಗಳ



ಬಗ್ಗೆ ಕರಪತ್ರಗಳನ್ನು ಹಂಚಿ ಫಲಾನುಭವಿಗಳಿಗೆ ಮಾಹಿತಿ ನೀಡುವಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಿದ್ದೇನೆ ಎಂದು ಹೇಳಿದರು.

2ನೇ ಪುಟಕ್ಕೆ

## ಆರ್. ಜಿ. ಕ್ಯಾಂಪ್ – 3 ಮತಕ್ಷೇತ್ರ: ಪಿ. ಸುಧಾಕರ ರಾವ್ ಭರ್ಜರಿ ಜಯ!

ಯುವ ಮಾರ್ಗ ಸುದ್ದಿ

**ಮಾನ್ವಿ,ಮೇ 29–** ಸಂಗಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಆರ್. ಜಿ. ಕ್ಯಾಂಪ್ – 3 ಮತಕ್ಷೇತ್ರದ ಉಪ ಚುನಾವಣಾ ಫಲಿತಾಂಶದಲ್ಲಿ ಪಿ. ಸುಧಾಕರ ರಾವ್ ಅವರು ಭರ್ಜರಿ ಜಯ ಸಾಧಿಸಿದ್ದಾರೆ.

ಪಿ. ಸುಧಾಕರ ರಾವ್ ಅವರು ಒಟ್ಟು 198 ಮತಗಳನ್ನು ಪಡೆದು ಜಯಶೀಲರಾಗಿದ್ದಾರೆ. ಅವರ ಪ್ರತಿಸ್ಪರ್ಧಿ ಎಸ್.ನಾಗೇಶ್ವರ ರೆಡ್ಡಿ ಅವರು 89 ಮತಗಳನ್ನು ಪಡೆದು ಸೋಲನ್ನು ಅನುಭವಿಸಿದ್ದಾರೆ. ಚುನಾವಣೆಯಲ್ಲಿ 13 ಮತಗಳು ಕುಲಗೆಟ್ಟ ಮತಗಳಾಗಿವೆ ಎಂದು ವರದಿಯಾಗಿದೆ.

ಪಿ. ಸುಧಾಕರ ರಾವ್ ಅವರು 109 ಮತಗಳ ಭಾರಿ ಅಂತರದಿಂದ ಜಯಗಳಿಸಿದ್ದಾರೆ. ಈ ಸಂದರ್ಭದಲ್ಲಿ ತಹಸಿಲ್ದಾರ್ ಭೀಮರಾಯ



ರಾಯಸಂದ್ರ, ದೇವರಾಜ್, ವಿರೂಪಾಕ್ಷಪ್ಪ ಶಿಕ್ಷಕರು, ಶಕ್ಷ ವಲಿ, ಸಿ ಎಚ್ ಮಾಂತಯ್ಯ ಆರ್ ಜಿ ಕ್ಯಾಂಪ್, ಪಿ.ಸುಬ್ಬರಾವ್, ಎ. ಸಾಂಬಶಿವರಾವ್, ಈರಣ್ಣ ನಾಯಕ, ಲಿಂಗಪ್ಪ ಆರ್ ಜಿ ಕ್ಯಾಂಪ್, ಡಿ ಪ್ರಸಾದ, ಅನ್ವರ್ ಪಾಷಾ ಮಾನ್ವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನರೇಗಾ ಕೂಲಿ ಹಣ ಬಿಡುಗಡೆಗೆ ಆಗ್ರಹಿಸಿ ಪ್ರತಿಭಟನೆ

**ಬಳ್ಳಾರಿ,ಮೇ.29–** ಬಾಕಿ ಇರುವ ನರೇಗಾ ಕೂಲಿಯನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿ ಇಂದು ಜಿಪಂ ಮುಂದೆ ಎಐಕೆಕೆಎಂಎಸ್ ನೇತೃತ್ವದಲ್ಲಿಪ್ರತಿಭಟನೆ ನಡೆಸಲಾಯಿತು.

ಕಳೆದ ಎ.1 ರಿಂದ ನರೇಗಾ ಕೂಲಿ ಕೆಲಸ ಮಾಡಿದ ಈ ವರೆಗೆ ಮಾಡಿದ ಕೆಲಸಕ್ಕೆ ಕೂಲಿ ಹಣ ಬಿಡುಗಡೆ ಮಾಡಿಲ್ಲ. ಕೂಡಲೇ ಬಿಡುಗಡೆ ಮಾಡಬೇಕು. ಪ್ರತಿಯೊಂದು ಕುಟುಂಬಕ್ಕೂ ಅವರ ಕೋರಿಕೆಯ ಮೇರೆಗೆ 100 ದಿನ ಕೆಲಸ ನೀಡಬೇಕು

ಪ್ರಯೊಬ್ಬರಿಗೂ ಪೂರ್ಣ ಕೂಲಿ ರೂ.370 ಗಳು ದೊರೆಯುವಂತೆ ಕ್ರಮ ವಹಿಸಬೇಕು. ನರೇಗಾ ಯೋಜನೆಯಡಿ ಇವರಿಗೆ ಸಿಗಬೇಕಾದ ಎಲ್ಲಾ ಸೌಲಭ್ಯಗಳನ್ನು ಕೂಡಲೇ ಒದಗಿಸಬೇಕು ಎಂದು ಮನವಿ ಮಾಡಲಾಗಿದೆ.




ಪ್ರತಿವರ್ಷ ನರೇಗಾ ಕೆಲಸ ಮಾಡಿದ 5 ರಿಂದ 10 ದಿನಗಳಲ್ಲಿ ಕೂಲಿ ಹಣ ಪಾವತಿಯಾಗುತ್ತಿತ್ತು. ಆದರೆ ಈ ವರ್ಷ ಬಿಡುಗಡೆಯಾಗಿಲ್ಲ. ಮೆಣಸಿನಕಾಯಿ ಬೆಳಗಾರರೂ ಮತ್ತು ಭತ್ತ ಬೆಳೆಗಾರರು ತಾವು ಈ ಬಾರಿ ಬೆಳೆದ ಬೆಳೆಗೆ ಸರಿಯಾದ

2ನೇ ಪುಟಕ್ಕೆ

## ತ್ಯಾಜ್ಯದ ಮೇಲಿನ ಸೆಸ್ ದರ ಹೆಚ್ಚಳ ಹಿಂಪಡೆಯುವಂತೆ ಬಿಜೆಪಿ ನಿಯೋಗದಿಂದ ಆಯುಕ್ತರಿಗೆ ಮನವಿ

**ಬೆಂಗಳೂರು, ಮೇ 29–** ನಗರದ ಜನತಗೆ ಹೊರೆಯಾಗಿ ಪರಿಣಮಿಸಿರುವ ತ್ಯಾಜ್ಯ ಸೆಸ್ ದರ ಹೆಚ್ಚಳ ಮಾಡಿರುವುದನ್ನು ತಕ್ಷಣವೇ ಹಿಂಪಡೆಯುವುದು, ಬೆಂಗಳೂರು ವಿಭಜನೆ ಕೈಬಿಡುವುದು, ಶೀಘ್ರವೇ ಚುನಾವಣೆ ನಡೆಸುವಂತೆ ಒತ್ತಾಯಿಸಿ ಮೂರು ಬೇಡಿಕೆಗಳನ್ನು ಮುಂದಿಟ್ಟು ಪ್ರತಿಪಕ್ಷ ಬಿಜೆಪಿ ಬಿಜೆಪಿ ನಿಯೋಗ ಬಿಬಿಎಂಪಿ ಆಡಳಿತಧಿಕಾರಿಗೆ ಮನವಿ ಮಾಡಿದೆ.

ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಆಶೋಕ್ ನೇತೃತ್ವದಲ್ಲಿ ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕರಾದ ಡಾ. ಸಿ.ಎನ್.ಅಶ್ವಥ್ ನಾರಾಯಣ, ರಾಮಮೂರ್ತಿ, ಕೆ.ಗೋಪಾಲಯ್ಯ, ರಘು, ಮುನಿರಾಜು, ರವಿ ಸುಬ್ರಮಣ್ಯ ಬೆಂಗಳೂರು ಉತ್ತರ ಜಿಲ್ಲಾ



ಬಿಜೆಪಿ ಅಧ್ಯಕ್ಷ ಎಸ್.ಹರೀಶ್, ಸೆಂಟ್ರಲ್ ಜಿಲ್ಲಾಧ್ಯಕ್ಷ ಸಪ್ತಗಿರಿಗೌಡ ಸೇರಿದಂತೆ ಮತ್ತಿತರ ಬಿಜೆಪಿ ಬಿಬಿಎಂಪಿ ಆಯುಕ್ತ ಮಹೇಶ್ವರ್

2ನೇ ಪುಟಕ್ಕೆ

## ಐದಬಾವಿ ಉಪಚುನಾವಣೆ: ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗೆ ಭರ್ಜರಿ ಜಯ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.29–** ತಾಲೂಕಿನ ದೇವರಭೂಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಐದಬಾವಿ ಗ್ರಾಮದಲ್ಲಿ 20–05–2025 ರಂದು ಉಪಚುನಾವಣೆ ನಡೆದದ್ದು, ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಆದೇಶ ಹುಡೇದ 452 ಮತ ಪಡೆದು ಜಯ ಸಾಧಿಸಿದ್ದಾರೆ ಎಂದು ಚುನಾವಣೆ ಅಧಿಕಾರಿ ಘೋಷಿಸಿದ್ದಾರೆ.

ದೇವರಭೂಪುರ ಗ್ರಾಮ ಪಂಚಾಯಿತಿ ಒಳಪಡುವ ಐದಬಾವಿ ಗ್ರಾಮದಲ್ಲಿ ಸಾಮಾನ್ಯ ಕ್ಷೇತ್ರದ ಗ್ರಾಮ ಪಂಚಾಯತ ಸದಸ್ಯರು ಮರಣ ಹೊಂದಿದ ಕಾರಣ, ಆ ಕ್ಷೇತ್ರಕ್ಕೆ ಉಪ ಚುನಾವಣೆ ನಡೆದದ್ದು ಬುಧವಾರ ಮಿನಿ ವಿಧಾನಸೌಧದಲ್ಲಿ ಮತ ಎಣಿಕೆ ನಡೆದಿದ್ದು ಫಲಿತಾಂಶ ಪ್ರಕಟಗೊಂಡಿದೆ, ಈ ಫಲಿತಾಂಶದಲ್ಲಿ ಆದೇಶ ಹುಡೇದ್ 452 ಮತಗಳನ್ನು ಪಡೆದು ಅವರ ಪ್ರತಿಸ್ಪರ್ಧಿ ಸಂಗಪ್ಪ ವಿರುದ್ಧ ಜಯ ಸಾಧಿಸಿದ್ದು ತಿಳಿದು ಬರುತ್ತಿದ್ದಂತೆ, ಕಾಂಗ್ರೆಸ್ ಪಕ್ಷದ ಕಾರ್ಯಾಲಯಕ್ಕೆ ತೆರಳಿ ಪಕ್ಷದ ಅಭಿಮಾನಿಗಳ ಜೊತೆ ಸಿಹಿ ಹಂಚಿ, ಪಟಾಕಿ ಹೊಡೆದು ಸಂಭ್ರಮಿಸಿದರು.ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅದ್ಯಕ್ಷ ಗೋವಿಂದ ನಾಯಕ, ಪುರಸಭಾ ಮಾಜಿ ಉಪಾಧ್ಯಕ್ಷ ಮಹ್ಮದ್ ರಫಿ, ಪುರಸಭೆ ಸದಸ್ಯ ರುದ್ರಪ್ಪ ಬ್ಯಾಗಿ, ಕೆಪಿಸಿಸಿ ಜಿಲ್ಲಾ ಪದವೀಧರ ವಿಭಾಗ ಅದ್ಯಕ್ಷ ಸಂಜೀವಪ್ಪ ಚಲುವಾದಿ, ಸೇರಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು, ಹಾಗೂ ಐದಾಬಾವಿ ಗ್ರಾಮದ ಅವರ ಅಪಾರ ಬೆಂಬಲಿಗರು ಇದ್ದರು.



## ಲಿಂಗಸುಗೂರು: ನಟ ವಿನೋದ್ ಪ್ರಭಾಕರ್ ನೋಡಲು ಮುಗಿಬಿದ್ದ ಅಭಿಮಾನಿಗಳು

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಮೇ.29–** ಚಿತ್ರ ನಟ ವಿನೋದ್ ಪ್ರಭಾಕರ್ ಪಟ್ಟಣಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಅಭಿಮಾನಿಗಳು ಅವರನ್ನು ನೋಡಲು ಮುಗಿಬಿದ್ದರು.

ಕಾರಿನ ಸನ್ ರೂಫ್ ಮೂಲಕ ಹೊರಗಡೆ ಬಂದ ನೆಚ್ಚಿನ ನಟನನ್ನು ಮುಟ್ಟಲು ಮಾತಾಡಲು ಜನ ಗುಂಪಾಗಿ ಮುಗಿಬಿದ್ದರು. ಅಭಿಮಾನಿಗಳನ್ನು ಕಂಡು ನಮಿಸಿದ ನಟ ವಿನೋದ್ ಪ್ರಭಾಕರ್ ಮಾರುತಿ ಯೂನಿಯನ್ ಫಿಟ್ ನೆಸ್ ಜಿಮ್‌ಗೆ ತೆರಳಿ ಕಸರತ್ತು ಮಾಡಿದರು. ಉತ್ತರ ಕರ್ನಾಟಕದ ಅಭಿಮಾನಿಗಳ ಅಭಿಮಾನ ಹಾಗೂ ಅವರ ಪ್ರೀತಿ ಸದಾ ಹೀಗೆಯೇ ಇರಲಿ ಎಂದು ಕೋರಿದರು. ಅಭಿಮಾನಿಗಳು ನಟನ ಕೈ ಕುಲುಕಿ, ಸೆಲ್ಫಿ ತೆಗೆದುಕೊಂಡು ಖುಷಿ ಪಟ್ಟರು.



ಈ ಸಂದರ್ಭದಲ್ಲಿ ಮುಖಂಡರಾದ ಮೋಹನ್ ಗೋಸ್ಲೆ, ಅನೀಲ್ ಕುಮಾರ್, ರಮೇಶ ಗೋಸ್ಲೆ, ಅಂಬರೇಶ ನಾಯಕ್, ದುರುಗಪ್ಪ ನಾಯಕ್ ಹೊನ್ನಳಿ, ಅಂಬರೇಶ ವೆಂಕಟಾಪುರ, ಮೌನೇಶ್ ಐದನಾಳ, ಹನುಮೇಶ ಆಕಾಶ ಡಿಜಿಟಲ್, ಅಂಬರೇಶ ಆನೆಹೊಸೂರ, ಹನುಮಂತ ಬಡಿಗೇರ ಸೇರಿದಂತೆ ಇದ್ದರು.

ಮೊದಲನೇಯ ಪುಟದಿಂದ

# ಮಳೆ ಹಾನಿ ಪ್ರದೇಶಕ್ಕೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಲು ಸಿಎಂ ಸೂಚನೆ

ಕೈಗೊಳ್ಳುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ.

ರಾಜ್ಯದಲ್ಲಿ ಆಗುತ್ತಿರುವ ಮಳೆಯ ಬಗ್ಗೆ ಸಮಗ್ರ ಚರ್ಚೆ ನಡೆಸಿ ಅಧಿಕಾರಿಗಳಿಗೆ ಅಗತ್ಯ ಸಲಹೆ–ಸೂಚನೆಗಳನ್ನು ನೀಡಲು ವಿಧಾನಸೌಧದಲ್ಲಿ ಇದೇ ತಿಂಗಳ 30 ಮತ್ತು 31 ರಂದು ಎಲ್ಲಾ ಜಿಲ್ಲಾಧಿಕಾರಿಗಳು, ಜಿ.ಪಂ. ಸಿಇಓಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯನ್ನು ಕರೆಯುವಂತೆಯೂ ಮುಖ್ಯಮಂತ್ರಿಗಳು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಸೂಚನೆ ನೀಡಿದ್ದಾರೆ.

**ಅಗತ್ಯ ಮುಂಜಾಗ್ರತಾ ಕ್ರಮ**

ರಾಜ್ಯದಲ್ಲಿ 170 ತಾಲ್ಲೂಕುಗಳನ್ನು ಭೂಕುಸಿತ ಮತ್ತು ಪ್ರವಾಹಕ್ಕೆ ಗುರಿಯಾಗುವ ತಾಲ್ಲೂಕುಗಳೆಂದು ಗುರುತಿಸಲಾಗಿದ್ದು, ಮುಂಜಾಗ್ರತೆಯಾಗಿ 2296 ಕಾಳಜಿ ಮತ್ತು ಆಶ್ರಯ ತಾಣಗಳನ್ನು ಗುರುತಿಸಲಾಗಿದೆ. ಹಾಗೆಯೇ ಬಿಬಿಎಂಪಿ ವ್ಯಾಪ್ತಿಯಲ್ಲಿ 201 ಸ್ಥಳಗಳನ್ನು ಪ್ರವಾಹ ಪೀಡಿತ ಸ್ಥಳಗಳನ್ನಾಗಿಯೂ ಗುರುತಿಸಲಾಗಿದೆ ಎಂದು ಮುಖ್ಯಮಂತ್ರಿ ಕಾರ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ಮೇ 26ರ ವರೆಗೆ ಮಳೆಯಿಂದ ರಾಜ್ಯದಲ್ಲಿ 45 ಮನೆಗಳು ಸಂಪೂರ್ಣವಾಗಿ ಹಾನಿಗೊಂಡಿದ್ದು, 1385 ಮನೆಗಳಿಗೆ ಭಾಗಶಃ ಹಾನಿಯಾಗಿದೆ. ಹಾನಿಗೊಳಗಾದ ಕುಟುಂಬಗಳಿಗೆ ಶೇ. 99 ರಷ್ಟು ಆರ್ಥಿಕ ನೆರವನ್ನು ನೀಡಲಾಗಿದೆ ಎಂದು ಮುಖ್ಯಮಂತ್ರಿಗಳ ಕಾರ್ಯಾಲಯ ತಿಳಿಸಿದೆ.

ವಿಪತ್ತು ನಿರ್ವಹಣೆಗೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಪಿ.ಡಿ. ಖಾತೆಯಲ್ಲಿ 97,351.95 ಲಕ್ಷ ರೂಪಾಯಿಗಳ ಅನುದಾನ ಲಭ್ಯ ಇರುತ್ತದೆ ಎಂದು ಪ್ರಕಟಣೆಯಲ್ಲಿ ಹೇಳಲಾಗಿದೆ.

# ಅರ್ಹ ಫಲಾನುಭವಿಗಳು ಸರ್ಕಾರದ ಸೌಲಭ್ಯ ಪಡೆಯಿರಿ: ಸಂಜಯ್ ಜಾಗೀರದಾರ್

371 (ಜೆ) ಜಾರಿ ಮುಂಚೆ ಈ ಭಾಗದಲ್ಲಿ ವೈದ್ಯರ ಸಂಖ್ಯೆ ಕಡಿಮೆಯಿದ್ದು, 371(ಜೆ) ಜಾರಿ ನಂತರ ವೈದ್ಯರು ಸೇರಿದಂತೆ ಇಂಜಿನಿಯರಗಳ ಸಂಖ್ಯೆ ಹೆಚ್ಚಳವಾಗಿದೆ. ಇದಕ್ಕೆ ಮುಖ್ಯ ಕಾರಣ ಈ ಭಾಗದ ಹಿರಿಯ ರಾಜಕಾರಣಿಯಾದ ಮಲ್ಲಿಕಾರ್ಜುನ ಖರ್ಗೆ ಅವರಾಗಿದ್ದಾರೆ ಎಂದು ಹೇಳಿದರು.

ನಿಗಮದ ಕೈಪಿಡಿಯಲ್ಲಿ ಯೋಜನೆ ಕುರಿತು ಮಾಹಿತಿ ಒದಗಿಸಲಾಗಿದ್ದು ಪ್ರತಿಯೊಬ್ಬರೂ ಕೈಪಿಡಿ ಓದಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಬೇಕು. ಉನ್ನತ ಶಿಕ್ಷಣ ಪಡೆದು ಐಎಎಸ್ ಐಪಿಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು. ಶಿಕ್ಷಣಕ್ಕಾಗಿ ನಿಗಮದಿಂದ ಅನೇಕ ಸೌಲಭ್ಯಗಳನ್ನು ಒದಗಿಸಲಾಗುತ್ತಿದ್ದು, ಒಟ್ಟು 30 ಲಕ್ಷ ರೂಪಾಯಿಗಳಷ್ಟು ಸಹಾಯಧನವನ್ನು ವಿದ್ಯಾಭ್ಯಾಸಕ್ಕಾಗಿ ನೀಡಲಾಗುತ್ತಿದೆ. ಪಿಎಸ್ಐ ತರಬೇತಿ ಸಹ ನೀಡಲಾಗುತ್ತಿದೆ. ಅವುಗಳನ್ನು ಅರ್ಹಫಲಾನುಭವಿಗಳು ಬಳಸಿಕೊಳ್ಳಬೇಕು ಎಂದು ಹೇಳಿದರು.

ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದಿಂದ ಶಿಕ್ಷಣ ಕ್ಷೇತ್ರಕ್ಕೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಶೇ.75ರಷ್ಟು ಫಲಿತಾಂಶ ಪಡೆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತದೆ ಎಂದು ಹೇಳಿದರು.

ಈ ವೇಳೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳಾದ ಸಂಗಮೇಶ್ ಅವರು ಮಾತನಾಡಿ, ಜಿಲ್ಲೆಯ ವಸತಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟ ಶಿಕ್ಷಣ ಜೊತೆಗೆ ಊಟ ಉಪಹಾರವನ್ನು ನೀಡಲಾಗುತ್ತಿದ್ದು, ಕೆಲವೊಂದು ವಸತಿ ಶಾಲೆಯಲ್ಲಿ ಕಾಟ್ ಗಳ ಕೊರತೆ ಇದ್ದು ಅದರ ಕುರಿತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮಾಹಿತಿ ಕೇಳಿದ್ದಾರೆ. ಶೀಘ್ರದಲ್ಲೇ ಮುಂಬರುವ ದಿನಗಳಲ್ಲಿ ಸಮಸ್ಯೆಯನ್ನು ಪರಿಹರಿಸಲಾಗುತ್ತದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ರಾಯಚೂರು ತಾಲೂಕು ವಿಸ್ತರಣಾಧಿಕಾರಿ ನರಸಿಂಹ ನಾಯಕ ಸೇರಿದಂತೆ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧಿಕಾರಿಗಳು ಇದ್ದರು.

# ನರೇಗಾ ಕೂಲಿ ಹಣ ಬಿಡುಗಡೆಗೆ ಆಗ್ರಹಿಸಿ ಪ್ರತಿಭಟನೆ

ಬೆಲೆ ಸಿಗದೆ ತುಂಬಾ ನಷ್ಟ ಅನುಭವಿಸಿದ್ದಾರೆ, ಈ ಬಾರಿ ಅವರು ಯಾವ ರೀತಿಯ ಹಣವನ್ನೂ ಸಹ ಕೂಡಿಟ್ಟಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಈ ಭಾಗದ ಜನ ಸಾಮಾನ್ಯರು ಗುಳೆ ಹೋಗಬೇಕಾದ ಪರಿಸ್ಥಿತಿ ಎದುರಾಗಿತ್ತು. ಆದರೆ ಈ ಭಾಗದಲ್ಲಿ ಜನರಿಗೆ ದೊರೆಯುವ ನರೇಗಾ ಕೆಲಸದ ಆಧಾರದ ಮೇಲೆ ಇಲ್ಲಿನ ಜನ ಗುಳೆ ಹೋಗುವುದನ್ನು ನಿಲ್ಲಿಸಿದ್ದಾರೆ. ಯೋಜನೆಯಲ್ಲಿ ಈಗ ಕೆಲಸ ಮಾಡಿ, ಎರೆಡು ತಿಂಗಳು ಕಳೆದರೂ ಸಹ ಅವರಿಗೆ ದೊರೆಯಬೇಕಿದ್ದ ಕೂಲಿಯು ಇನ್ನು ದೊರೆಯದಿರುವುದು ಅವರನ್ನು ಮತ್ತು ಅವರ ಕುಟುಂಬವನ್ನು ಸಂಕಷ್ಟಕ್ಕೆ ನೂಕಿದಂತಾಗಿದೆ.

ಅಡುಗೆ ಎಣ್ಣೆ, ಬೆಳೆ–ಕಾಳುಗಳು, ಗ್ಯಾಸ್, ಪೆಟ್ರೋಲ್, ಡೀಸೆಲ್ ಸೇರಿದಂತೆ ಹಲವಾರು ಜೀವನಾವಶ್ಯಕ ವಸ್ತುಗಳ ಬೆಲೆಗಳು ಗಗನಕ್ಕೇರುತ್ತಿದ್ದು, ಈಗ ಅವರು ಜೀವನ ನಡೆಸಲು ಕೂಡಲೇ ಅವರಿಗೆ ಹಣದ ಅವಶ್ಯಕತೆ ಇದೆ. ಆದ್ದರಿಂದ ಕೂಲಿ ಕಾರ್ಮಿಕರ ಹಿತ ದೃಷ್ಟಿಯಿಂದ ಕೂಡಲೇ ಬಾಕಿ ಇರುವ ವೇತವನವನ್ನು ಬಿಡುಗಡೆಗೊಳಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಅಧ್ಯಕ್ಷ ಗೋವಿಂದ್, ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ, ಜಿಲ್ಲಾ ಉಪಾಧ್ಯಕ್ಷ ಬಸಣ್ಣ, ಜಿಲ್ಲಾ ಸಮಿತಿ ಸದಸ್ಯರಾದ ಬಸವರಾಜ್, ಕಾಸಿಂ ಸಾಬ್, ಮುಖಂಡ ಕೋಳೂರು ಪಂಪಾ6, ಕಲ್ಲುಕಂಬ ಪಂಪಾಪತಿ, ಈರಣ್ಣ , ಮರೆಪ್ಪ ಪಂಪನಗೌಡ , ರೈತರಾದ ಅಂಬರೀಶ್, ಹನುಮನ್ತಮ್ಮ, ರಾಮಲಿಂಗಮ್ಮ, ಪದ್ಮಾವತಿ, ಭಾಗ್ಯಮ್ಮ, ಲಕ್ಷಮ್ಮ ಸೇರಿದಂತೆ ಇನ್ನಿತರು ಇದ್ದರು.

# ತ್ಯಾಜ್ಯದ ಮೇಲಿನ ಸೆಸ್ ದರ ಹೆಚ್ಚಳ ಹಿಂಪಡೆಯುವಂತೆ ಬಿಜೆಪಿ ನಿಯೋಗದಿಂದ ಆಯುಕ್ತರಿಗೆ ಮನವಿ

ರಾವ್ ಹಾಗೂ ಆಡಳಿತಾಧಿಕಾರಿ ತುಷಾರ್ ಗಿರಿನಾಥ್ ಅವರಿಗೆ ಹೆಚ್ಚಳ ಮಾಡಿರುವ ಸೆಸ್ ದರ ಹಿಂಪಡೆಯುವಂತೆ ಒತ್ತಾಯ ಮಾಡಿದರು. ಬೆಂಗಳೂರು ನಗರವನ್ನು ದುಬೈ ಮೀರಿದ ದುಬಾರಿ ನಗರವನ್ನು ಮಾಡಿರುವ ಅಪಕೀರ್ತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ನಗರ ಉಸ್ತುವಾರಿ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಸಲ್ಲುತ್ತದೆ. ಬ್ರಾಂಡ್ ಬೆಂಗಳೂರು ಹೆಸರಲ್ಲಿ ಸಾವಿರಾರು ಕೋಟಿ ವೆಚ್ಚದ ಅವಾಸ್ತವಿಕ ಯೋಜನೆಯನ್ನು ಪೂರ್ವಾಪರ ಆಲೋಚನೆ ಮಾಡದೆ ಜಾರಿಗೆ ತರಲು ಮುಂದಾಗಿರುವುದು ಇವರಿಬ್ಬರ ದುರಾಡಳಿತಕ್ಕೆ ಬೆಂಗಳೂರು ನಗರದ ನಾಗರಿಕರು ಜರ್ಜರಿತರಾಗಿ ಹೋಗಿದ್ದಾರೆ ಎಂದು ಕಿಡಿಕಾರಲಾಗಿದೆ.

ವೈಟ್ ಟ್ಯಾಪಿಂಗ್ ಎಂಬ ಮತ್ತೊಂದು ದುಬಾರಿ ಯೋಜನೆಯು ಸಾವಿರಾರು ಕೋಟಿ ವೆಚ್ಚದಲ್ಲಿ ಜಾರಿಗೊಳಿಸಲಾಗುತ್ತಿದೆ.ನಿಗದಿತ ದುಪ್ಪಟ್ಟು ಅವಧಿಯಲ್ಲಿಯೂ ಪೂರ್ಣಗೊಳ್ಳದ ಕಾಮಗಾರಿ. ವ್ಯಾಪರಸರ ವಹಿವಾಟಿಗೆ ಕಲ್ಲು ಹಾಕಿದೆ ಮತ್ತು ಅಂತರ್ಜಲ ಶತೃವಾದ ಈ ಯೋಜನೆಯು ನಾಗರಿಕರಿಗೆ ಶಾಪವಾಗಿದೆ ಸರ್ಕಾರದ ವಿರುದ್ಧ ಟೀಕಾ ಪ್ರಹಾರವನ್ನು ಬಿಜೆಪಿ ನಡೆಸಿದೆ. ಮನವಿ ಪತ್ರ ಸಲ್ಲಿಸಿದ ಬಳಿಕ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಸುದ್ದಿಗಾರರೊಂದಿಗೆ ಮಾತನಾಡಿ, ಬೆಂಗಳೂರಿನ ಜನರ ಮೇಲೆ ಈಗಾಗಲೇ ಮಣ್ಣಗಟ್ಟಲೆ ಟ್ಯಾಕ್ಸ್ ಹಾಕಿದ್ದಾರೆ.ಹಾಲಿಂದ ಹಾಲ್ಕೊಹಾಲ್ ವರೆಗೆ ತೆರಿಗೆ ಹಾಕಿದ್ದಾರೆ. ಕಸದಿಂದ ರಸ ಮಾಡಿಕೊಳ್ಳಲು ಸೆಸ್ ಹೆಚ್ಚಳ ಮಾಡಿದ್ದಾರೆ.ಇವರು ಮನೆ ಕಟ್ಟುವವರಲ್ಲ. , ಮನೆ ಹಾಳು ಮಾಡುವವರು ಎಂದು ಸರ್ಕಾರದ ವಿರುದ್ಧ ವಾಗ್ದಳಿ ನಡೆಸಿದರು. ಹಿಂದೆ ಕೆಂಪೇಗೌಡರಿಗೆ ನಾಡು ಕಟ್ಟಿದವರು ಎನ್ನುತ್ತಿದ್ದರು. ಈಗ ಕಾಂಗ್ರೆಸ್ ನವರು ಮನೆ ಹಾಳು ಮಾಡುವವರು.ಹಿಂದೆ ಸೆಸ್ ಎಂಬುದು ಇತ್ತು. ಈಗ ಯೂರ್ಸ ಫೀಸ್ ಮಾಡಿದ್ದಾರೆ.ಕಸದ ಟೆಂಡರ್ ಕರೆದಿರುವುದು 150 ಕೋಟಿಗೆ. ಈಗ ಸಂಗ್ರಹ ಮಾಡುತ್ತಿರುವುದು 500–600 ಕೋಟಿ.ಯಾರ ಮನೆ ಹಾಳು ಮಾಡಲು ಇಷ್ಟು ತೆರಿಗೆ ಸಂಗ್ರಹ ಮಾಡ್ತಿದ್ದೀರಿ?ಇದರಿಂದ ಮನೆ ಮಾಲೀಕರು ಬಾಡಿಗೆ ಹೆಚ್ಚಳ ಮಾಡುತ್ತಾರೆ. ಮನೆ ಮಾಲೀಕರು, ಬಾಡಿಗೆದಾರರ ನಡುವೆ ಗಲಾಟೆ ಶುರುವಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.ಕಲ್ಯಾಣ ಮಂಟಪ ದರ ಹೆಚ್ಚಳ ಮಾಡುತ್ತಿದ್ದಾರೆ. ಹೊಟೆಲ್ ನವರು ತಿಂಡಿ ದರ ಹೆಚ್ಚಳ ಮಾಡುತ್ತಾರೆ. ಇದಕ್ಕೆ ಕಾರಣ ನೀವೇ.! ಬೆಂಗಳೂರು ಜನರ ಲೂಟಿ ಮಾಡಲು ಹೊರಟಿದ್ದೀರಿ.ಹಿಂದೆ ನಮ ಸರ್ಕಾರ ಇದ್ದಾಗ ಕೆ.ಜಿ ಲೆಕ್ಕದಲ್ಲಿ ಹ.ಇವರು ಸ್ಕ್ವರ್ಕ ಫೀಟ್ ಲೆಕ್ಕದಲ್ಲಿ ದರ ಹಾಕುತ್ತಿದ್ದಾರೆ. ನಾವು ಜನರ ಮೇಲೆ ಹೊರೆ ಎಂದು ಢ ಬೆಂಗಳೂರು ಎಂಎಲ್ಎ ಸೇರಿ ತಡೆ ನೀಡಿದೆವು ಎಂದು ಹೇಳಿದರು. ಇವರಿಗೆ ಗ್ಯಾರಂಟಿ ಹಣ ಬೇಕು.ಅದನ್ನ ಒದಗಿಸೋಕೆ ತೆರಿಗೆ ಹಾಕಿದ್ದಾರೆ. ಮುಂದಿನ ತಿಂಗಳಲ್ಲಿ ವಾಪಸ್ ತೆಗೆದುಕೊಳ್ಳಬೇಕು.ಸ್ಕ್ವರ್ಯ ಫೀಟ್ ಲೆಕ್ಕ ಬಿಟ್ಟು, ಕೆ.ಜಿ ಲೆಕ್ಕದಲ್ಲಿ ತೆರಿಗೆ ಸಂಗ್ರಹ ಮಾಡಿ.ಇಲ್ಲದಿದ್ದರೆ ನಿಮಗೆ ಜನರ ಶಾಪ ತಟ್ಟಲಿದೆ.ಬೆಂಗಳೂರು ಹೊರತುಪಡಿಸಿದ್ರೆ, ಬೇರೆ ಯಾವುದೇ ನಗರದಲ್ಲಿ ಕಸಕ್ಕೆ ಇಷ್ಟು ಸೆಸ್ ಇಲ್ಲ.ಇದು ಬೆಂಗಳೂರಿಗರಿಗೆ ಶಾಪ, ದುಬಾರಿ ಬೆಂಗಳೂರು ಆಗಿದೆ ಎಂದು ಕಿಡಿಕಾರಿದರು.

# ಐಪಿಎಲ್ ಕ್ರಿಕೆಟ್ ಬೆಟ್ಟಿಂಗ್: ಓರ್ವನ ಬಂಧನ



**ಕಲಬುರಗಿ,ಮೇ.29–**ಇಲ್ಲಿನ ಸುನೀಲ ನಗರದ ಫಿಲ್ಟರ್ ಬೆಡ ಹನುಮಾನ ಗುಡಿಯ ಹಿಂಭಾಗದ ಕಟ್ಟೆಯ ಮೇಲೆ ಐಪಿಎಲ್ ಕ್ರಿಕೆಟ್ ಬೆಟ್ಟಿಂಗ್ ನಡೆಯುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆಯ ಎಎಸ್ಐ ಶಿವಶರಣಪ್ಪ, ಸಿಬ್ಬಂದಿಗಳಾದ ಶಿವಾನಂದ, ಸುರೇಶ, ಮೋಸಿನ್, ಸೈಯದ್ ತೌಸಿಫ್ ಹುಸೇನ್ ಅವರು ದಾಳಿ ನಡೆಸಿ ಓರ್ವನನ್ನು ಬಂಧಿಸಿದ್ದಾರೆ.

ಆಳಂದ ತಾಲ್ಲೂಕಿನ ಚಿಂಚನಸೂರ ಗ್ರಾಮದ ಮಹಾರುದ್ರಪ್ಪ ತಂದೆ ಚನ್ನಮಲ್ಲಪ್ಪ ಗುಮ್ಮಾ (34) ಎಂಬಾತನನ್ನು ಬಂಧಿಸಿ 5 ಸಾವಿರ ರೂ.ನಗದು ಜಪ್ತಿ ಮಾಡಿದ್ದಾರೆ. ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇಂದಿರಾ ಕ್ಯಾಂಟೀನ್ ವೀಕ್ಷಿಸಿದ ಸಚಿವ ರಹೀಂ ಖಾನ್



**ಕಲಬುರಗಿ,ಮೇ.29–** ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್ ಅವರು ಇಂದು ಇಲ್ಲಿನ ವಾರ್ಡ್ ನಂ.46 ವ್ಯಾಪ್ತಿಗೆ ಬರುವ ಜಿಮ್ಸ್ ಆಸ್ಪತ್ರೆ ಆವರಣದಲ್ಲಿರುವ ಇಂದಿರಾ ಕ್ಯಾಂಟೀನ್ ಗೆ ಭೇಟಿ ನೀಡಿದ ಅವರು, ಸಾರ್ವಜನಿಕರ ಬೇಡಿಕೆಯಂತೆ ಪ್ರತಿ ದಿನ 1,000 ಪ್ರಮಾಣದಲ್ಲಿ ಉಪಹಾರ, ಊಟ ಪೂರೈಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಜಿಲ್ಲಾ ಆಸ್ಪತ್ರೆ ಸ್ಥಳ ಇದಾಗಿದ್ದರಿಂದ ಸಹಜವಾಗಿಯೇ ಜಿಲ್ಲೆಯ ತಾಲೂಕಾ ಪ್ರದೇಶದಿಂದ ರೋಗಿಗಳು ಮತ್ತು ಅವರ ಸಂಬಂಧಿಕರ ಹೆಚ್ಚಿನ ಓಡಾಟ ಇರುವುದರಿಂದ ಬೇಡಿಕೆಯಂತೆ 500 ರಿಂದ 1,000 ಕ್ಕೆ ಪ್ರಮಾಣ ಹೆಚ್ಚಿಸಲು ಸೂಚಿಸಲಾಗಿದೆ ಎಂದರು.

ಕಳೆದ ಬಾರಿ ನಮ್ಮ ಸರ್ಕಾರದ ಅವಧಿಯಲ್ಲಿ ರಾಜ್ಯದಾದ್ಯಂತ 350 ಇಂದಿರಾ ಕ್ಯಾಂಟೀನ್ ತೆರೆಯಲಾಗಿತ್ತು. ಈ ವರ್ಷ 184 ಹೊಸದಾಗಿ ತೆರೆಯಲು ನಿರ್ಧರಿಸಿದೆ. ಬಡವರು, ಕೂಲಿ ಕಾರ್ಮಿಕರು, ಆಟೋ ಚಾಲಕರು, ಬೀದಿ ಬದಿ ವ್ಯಾಪಾರಿಳಿಗೆ ಕಡಿಮೆ ಮೊತ್ತದಲ್ಲಿ ಉಪಹಾರ, ಊಟ ಪೂರೈಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಇದಾಗಿದೆ ಎಂದರು.

**ತಿಂಡಿ ಸವಿದ ಸಚಿವರು:**

ಕ್ಯಾಂಟೀನ್ ಭೇಟಿ ವೇಳೆಯಲ್ಲಿ ಮಾಸ್ಟರ್ ಕಿಚನ್ ರೂಂ ಸಹ ವೀಕ್ಷಿಸಿದ ಸಚಿವ ರಹೀಂ ಖಾನ್ ಅವರು ಚಪಾತಿ, ಮೊಸರನ್ನ ಸವಿದು ಉಪಹಾರದ ಗುಣಮಟ್ಟ ಪರಿಶೀಲಿಸಿದರು. ಕ್ಯಾಂಟೀನ್ ನಲ್ಲಿ ಪ್ರತಿ ದಿನ ಬೆಳಿಗ್ಗೆ, ಮಧ್ಯಾಹ್ನ, ರಾತ್ರಿ ನೀಡಲಾಗುವ ಉಪಹಾರ, ಊಟದ ಬಗ್ಗೆ ಮೆನು ಅಳವಡಿಸಬೇಕು ಮತ್ತು ಬಡವರಿಗೆ ಗುಣಟ್ಟದ ಆಹಾರ ಪೂರೈಸಬೇಕು, ಸ್ವಚ್ಛತೆ ಕಾಪಾಡಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಿದರು.

ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಉಪ ಆಯುಕ್ತ ಆರ್.ಪಿ.ಜಾಧವ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನಾವರ ದೌಲ, ಪರಿಸರ ಅಭಿಯಂತ ಅಭಯಕುಮಾರ ಸೇರಿದಂತೆ ಇನ್ನಿತರ ಅಧಿಕಾರಿಗಳಿದ್ದರು.

# ಜನನ ಮತ್ತು ಮರಣ ನೋಂದಣಿ ವಿಳಂಬವಾಗಬಾರದು:ಜಿಲ್ಲಾಧಿಕಾರಿ




**ಬಳ್ಳಾರಿ,ಮೇ 29–** ಜಿಲ್ಲೆಯಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯು ಯಾವುದೇ ಕಾರಣಕ್ಕೂ ವಿಳಂಬವಾಗದೇ ನಿಗದಿತ ಸಮಯದಲ್ಲಿ ಜರುಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಬೆಳೆ ಕಟಾವು ಪ್ರಯೋಗಗಳ ಪ್ರಗತಿ ಪರಿಶೀಲನೆ, ಬೆಳೆ ಕ್ಷೇತ್ರ ಮರು ಹೊಂದಾಣಿಕೆ ಮತ್ತು ಜನನ–ಮರಣ ನಾಗರೀಕ ನೋಂದಣಿ ಪದ್ಧತಿಯ ಕುರಿತ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಜನನ ಘಟನೆಗಳ ಪ್ರಮಾಣವು ವಾರ್ಷಿಕ ಅಂದಾಜು 30 ಸಾವಿರವಿದೆ. ಪ್ರತಿ ತಿಂಗಳು, ಪ್ರತಿ ಆಸ್ಪತ್ರೆಗಳಲ್ಲಿ ಎಷ್ಟು ಜನನ ಘಟನೆಗಳು ಸಂಭವಿಸುತ್ತಿವೆ ಹಾಗೂ ಎಷ್ಟು ಮಂದಿ ಜನನ ಪ್ರಮಾಣ ಪಡೆದುಕೊಳ್ಳುತ್ತಿದ್ದಾರೆ ಎಂಬುದನ್ನು ಪರಿಶೀಲಿಸಿ, ಮಾಹಿತಿ ಸಂಗ್ರಹಿಸಬೇಕು. ಈ ಕುರಿತು ಆಯಾ ತಾಲ್ಲೂಕು ತಹಶೀಲ್ದಾರರ ನೇತೃತ್ವದಲ್ಲಿ ತಾಲೂಕು ಮಟ್ಟದ ಜನನ ಮತ್ತು ಮರಣ ಸಮನ್ವಯ ಸಮಿತಿ ಸಭೆಗಳನ್ನು ನಿಯಮಿತವಾಗಿ ಜರುಗಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಅದೇರೀತಿಯಾಗಿ ಮರಣ ಘಟನೆಗಳನ್ನು ಹೇಗೆ ಗಣತಿ ಮಾಡುತ್ತೀರಿ ಎಂದು ವಿಚಾರಿಸಿದ ಜಿಲ್ಲಾಧಿಕಾರಿಗಳು, ಮರಣ ಘಟನೆಗಳು ಕೇವಲ ಆಸ್ಪತ್ರೆಗಳಲ್ಲಿ ಸಂಭವಿಸಿದರೆ ಗೊತ್ತಾಗುತ್ತದೆ, ಆದರೆ ಸಮುದಾಯದಲ್ಲಿ ನಡೆದ ಮರಣ ಘಟನೆಗಳನ್ನು ಸಹ ತಪ್ಪದೇ ಗಣತಿ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎನ್.ಕೆ.ಪತ್ರಿ ಬಸಪ್ಪ ಅವರು ಮಾತನಾಡಿ, 2025 ರ ಜನವರಿಯಿಂ ದ ಏಪ್ರಿಲ್ ರವರೆಗೆ ಜಿಲ್ಲೆಯಲ್ಲಿ ಜನನ ನೋಂದಣಿ ವಿವರ ಕುರಿತಂತೆ ಗಂಡು–4,827, ಹೆಣ್ಣು–4,361 ಸೇರಿ ಒಟ್ಟು 9,188 ಘಟನೆಗಳು ನೋಂದಣಿಯಾಗಿವೆ. ಅದೇರೀತಿಯಾಗಿ 2025 ರ ಜನವರಿಯಿಂದ ಏಪ್ರಿಲ್ ರವರೆಗೆ ಜಿಲ್ಲೆಯಲ್ಲಿ ಮರಣ ನೋಂದಣಿ ವಿವರ ಕುರಿತಂತೆ ಗಂಡು–2,608, ಹೆಣ್ಣು–1,775 ಮತ್ತು ಲಿಂಗತ್ವ ಅಲ್ಪಸಂಖ್ಯಾತರು–1 ಸೇರಿದಂತೆ ಒಟ್ಟು 4,384 ಘಟನೆಗಳು ನೋಂದಣಿಯಾಗಿವೆ ಎಂದು ಸಭೆಗೆ ತಿಳಿಸಿದರು. ಜನನ ಘಟನೆಗಳು 21 ದಿನಗಳೊಳಗಾಗಿ ಸಂಭವಿಸಿದ್ದರೆ ಉಚಿತವಾಗಿ ಪ್ರಮಾಣ ಪತ್ರ ಪಡೆಯಬಹುದು. ಘಟನೆ ಸಂಭವಿಸಿ 21 ದಿನದಿಂದ 30 ದಿನಗಳೊಳಗಿದ್ದರೆ ಪ್ರಮಾಣ ಪತ್ರ ಪಡೆಯಲು ರೂ.20 ಪಾವತಿಸಬೇಕು. 30 ದಿನಗಳ ನಂತರ ಪಡೆಯುವಂ ತಿದ್ದಲ್ಲಿ ರೂ.50 ಪಾವತಿಸಬೇಕು ಎಂದು ಮಾಹಿತಿ ತಿಳಿಸಿದರು.

ಜಿಲ್ಲಾಧಿಕಾರಿಗಳು ಮಾತನಾಡಿ, ಜನನ ಮತ್ತು ಮರಣ ಪ್ರಮಾಣ ವಿತರಣೆಯಲ್ಲಿ ಸಾರ್ವಜನಿಕರನ್ನು ವಿನಾಃಕಾರಣ ಅಲೆದಾಡಿಸುವಂತಿಲ್ಲ. ಮುಖ್ಯವಾಗಿ ಸುಳ್ಳು ಪ್ರಮಾಣ ಪತ್ರ ವಿತರಣೆ ಮಾಡುವಂತಿಲ್ಲ ಎಂದು ತಿಳಿಸಿದರು. ಕೃಷಿ ಗಣತಿ ಕಾರ್ಯದಲ್ಲಿ ಸಹ ಈವರೆಗೆ ಜಿಲ್ಲೆಯಲ್ಲಿ ಬಿತ್ತನೆಯಾಗಿರುವುದು ಮತ್ತು ಬಿತ್ತನೆಯಾಗದಿರುವುದರ ಕುರಿತು ವಿವಿಧ ನಮೂನೆಗಳಲ್ಲಿ ಪ್ರಯೋಗದ ಮಾಹಿ ತಿಯನ್ನು ಆಯಾ ತಾಲ್ಲೂಕುಗಳ ತಹಶೀಲ್ದಾರರು ತಪ್ಪದೇ ನಮೂದಿಸಬೇಕು ಎಂದು ಎಲ್ಲಾ ತಾಲ್ಲೂಕು ತಹಶೀಲ್ದಾರರಿಗೆ ತಿಳಿಸಿದರು. ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ, ಸಂಡೂರು ತಾಲ್ಲೂಕು ತಹಶೀಲ್ದಾರ ಅನೀಲ್ ಕುಮಾರ್ ಸೇರಿದಂತೆ ಕೃಷಿ, ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ತಾಲ್ಲೂಕು ತಹಶೀಲ್ದಾರರು ಉಪಸ್ಥಿತರಿದ್ದರು.

# ಮಾಜಿ ಯೋಧರಿಗಾಗಿ ಪ್ರತ್ಯೇಕ ನಿಗಮ ಸ್ಥಾಪಿಸಲು ಚಿಂತನೆ : ಡಿಸಿಎಂ ಡಿಕೆಶಿ



**ಬೆಂಗಳೂರು, ಮೇ 29–**ರಾಜ್ಯದಲ್ಲಿರುವ ಎಲ್ಲಾ ಮಾಜಿ ಯೋಧರಿಗೆ ನೆರವಾಗಲು ಪ್ರತ್ಯೇಕ ನಿಗಮ ಸ್ಥಾಪಿಸಲು ಚಿಂತನೆ ನಡೆಸಲಾಗಿದ್ದು, ಈ ವಿಚಾರವನ್ನು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನ ಮಾಡಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ನಗರದ ಪುರಭವನದಲ್ಲಿಂದು ನಡೆದ ಜೈ ಹಿಂದ್ ಸಭಾ ಕಾರ್ಯಕ್ರಮದಲ್ಲಿ ದೇಶಕ್ಕೆ ಸೇವೆ ಸಲ್ಲಿಸಿದ ಹಿರಿಯ ಸೇನಾಧಿಕಾರಿಗಳು ಹಾಗೂ ಮಾಜಿ ಯೋಧರು, ಹುತಾತ್ಮರಾದ ಯೋಧರ ಕುಟುಂಬ ಸದಸ್ಯರನ್ನು ಸನ್ಮಾನಿಸಿದ ನಂತರ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಸೈನಿಕರ ವಿಭಾಗದ ಅಧ್ಯಕ್ಷರಾದ ಮಲ್ಲಿಕಾರ್ಜುನ ಅವರ ಸಲಹೆ ಮೇರೆಗೆ ಕಾರ್ಪೊರೇಷನ್ ರಚಿಸಲು ಆಲೋಚಿಸುತ್ತಿದ್ದೇವೆ. ನಮ್ಮ ದೇಶಕ್ಕೆ ಸೇವೆ ಸಲ್ಲಿಸಿರುವ ಯೋಧರ ರಕ್ಷಣೆಗೆ ನಾವು ಬದ್ಧರಾಗಿದ್ದೇವೆ ಎಂದು ಹೇಳಿದರು.

ಇಂತಹ ಅತ್ಯಂತ ಮಹತ್ವದ ಕಾರ್ಯಕ್ರಮದ ಭಾಗವಾಗಿರುವುದು ಹೆಮ್ಮೆಯ ವಿಚಾರ. ದೇಶಕ್ಕೆ ಶಕ್ತಿ ತುಂಬಿರುವ ನಿಮ್ಮೆಲ್ಲರಿಗೆ ದೇಶ ಹಾಗೂ ಕಾಂಗ್ರೆಸ್ ಪಕ್ಷದ ಪರವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಕಾಂಗ್ರೆಸ್ ಪಕ್ಷ ಸದಾ ದೇಶ ಹಾಗೂ ನಮ್ಮ ಸಶಸ್ತ್ರ ಪಡೆಗಳ ಪರವಾಗಿ ನಿಲ್ಲಲಿದೆ. ನಿಮ್ಮ ಕೊಡುಗೆಯನ್ನು ಸದಾ ಸ್ಮರಿಸಲಿದೆ ಎಂಬುದಕ್ಕೆ ಈ ಕಾರ್ಯಕ್ರಮ ಸಾಕ್ಷಿಯಾಗಿದೆ ಎಂದರು.

ಹಿರಿಯ ಸೇನಾಧಿಕಾರಿಗಳು, ಹುತಾತ್ಮ ಯೋಧರ ಕುಟುಂಬಕ್ಕೆ ಸನ್ಮಾನ: ಕಾರ್ಯಕ್ರಮದಲ್ಲಿ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿರುವ ಹಿರಿಯ ಸೇನಾಧಿಕರಿಗಳು ಹಾಗೂ ಮಾಜಿ ಯೋಧರಿಗೆ ಸ್ಮರಣಿಕೆ ನೀಡಿ ಗೌರವಿಸಲಾಯಿತು. ಇನ್ನು ದೇಶ ಸೇವೆಯಲ್ಲಿ ಹುತಾತ್ಮರಾದ ವೀರ ಯೋಧರ ಕುಟುಂಬ ಸದಸ್ಯರಿಗೆ ಸನ್ಮಾನ ಸಲ್ಲಿಸಿದರು.

ಅಶೋಕ ಚಕ್ರ ಪ್ರಶಸ್ತಿ ಪುರಸ್ಕೃತ ದಿವಂಗತ ಮೇಜರ್ ಸಂದೀಪ್ ಉನ್ನಿಕೃಷ್ಣನ್, ಅಶೋಕ ಚಕ್ರ ಪ್ರಶಸ್ತಿ ಪುರಸ್ಕೃತ ಕರ್ನಲ್ ಜೋಜನ್ ಥಾಮಸ್, ಶೌರ್ಯ ಚಕ್ರ ಪ್ರಶಸ್ತಿ ಪುರಸ್ಕೃತರಾದ ಮೇಜರ್ ಎಂ.ಸಿ.ಮುತ್ತಣ್ಣ, ಮೇಜರ್ ಗಣೇಶ್ ಮದ್ದಪ್ಪ, ಕ್ಯಾಪ್ಟನ್ ಎಂ.ವಿ.ಪಂಜಲ್, ಮೇಜರ್ ಮೋಹನ್ ಗಂಗಾಧರನ್ ಮೇಜರ್ ಶಫೀಕ್ ಮೊಹಮದ್ ಖಾನ್, ಸೇನಾ ಪದಕ ಪುರಸ್ಕೃತ ಕರ್ನಲ್ ರಾಮಮೂರ್ತಿ ಕುಟುಂಬ ಸದಸ್ಯರನ್ನು ಸನ್ಮಾನಿಸಲಾಯಿತು.

ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ನಿರ್ದೇಶನದ ಮೇರೆಗೆ ಕರ್ನಾಟಕ ರಾಜ್ಯ ಪ್ರದೇಶ ಕಾಂಗ್ರೆಸ್ ಸಮಿತಿಯು ಈ ಜೈ ಹಿಂದ್ ಸಭಾ ಕಾರ್ಯಕ್ರಮವನ್ನು ಆಯೋಜಿಸಿತ್ತು. ಈ ಕಾರ್ಯಕ್ರಮದಲ್ಲಿ ಸುಮಾರು ಸಾವಿರಕ್ಕೂ ಹೆಚ್ಚು ಸೇನೆಯ ಹಿರಿಯ ಅಧಿಕಾರಿಗಳು, ಮಾಜಿ ಯೋಧರು ಭಾಗವಹಿಸಿದ್ದರು. ದೇಶಕ್ಕಾಗಿ ನಿಸ್ವಾರ್ಥ ಸೇವೆ ಸಲ್ಲಿಸಿರುವ ಭಾರತೀಯ ಯೋಧರಿಗೆ ನಮನ ಸಲ್ಲಿಸಬೇಕು, ಅವರ ಬೆನ್ನಿಗೆ ನಿಲ್ಲಬೇಕು ಎಂಬ ಉದ್ದೇಶದಿಂದ ಎಐಸಿಸಿಯು ದೇಶದಾದ್ಯಂತ ಈ ಕಾರ್ಯಕ್ರಮ ಆಯೋಜಿಸಲು ನಿರ್ದೇಶನ ನೀಡಿದೆ.

# 5ನೇ ತಲೆಮಾರಿನ ಯುದ್ಧ ವಿಮಾನಕ್ಕೆ ಕೇಂದ್ರ ಅಸ್ತು

**ನವದೆಹಲಿ,ಮೇ.29–** ಅತ್ಯಾಧುನಿಕ ಮಧ್ಯಮ ವರ್ಗದ ಯುದ್ಧ ವಿಮಾನ ಎಂದು ಕರೆಯಲ್ಪಡುವ ಸ್ಥಳೀಯ ಐದನೇ ತಲೆಮಾರಿನ ಯುದ್ಧ ವಿಮಾನ ಯೋಜನಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನೇತೃತ್ವದದಲ್ಲಿ ನಡೆದ ಸಭೆಯಲ್ಲಿ ಖಾಸಗಿ ಸಂಸ್ಥೆಗಳು, ಹಿಂದೂಸ್ತಾನ್ ಏರೋನಾಟಿಕ್ಸ್ ಜೊತೆಗೆ ಈ ಯೋಜನೆಗೆ ಬಿಡ್ ಮಾಡಬಹುದು ಎಂದು ಹೇಳಲಾಗಿದೆ.

ದೇಶೀಯ ಏರೋಸ್ಪೇಸ್ ಕೈಗಾರಿಕಾ ಪರಿಸರ ವ್ಯವಸೆ ಮೂಲಕ ಮೂಲಮಾದರಿ ಅಭಿವೃದ್ಧಿ ಮತ್ತು ಸೇರ್ಪಡೆ ವೇಗಗೊಳಿಸುವ ಗುರಿ ಹೊಂದಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೊಸ ಮಾದರಿಯು, ಯುದ್ಧವಿಮಾನ ಉತ್ಪಾದನೆ ಸಂರಕ್ಷಣೆ ಮಾತ್ರ ಎಂಬ ದೇಶದ ದೀರ್ಘಕಾಲೀನ ನೀತಿಯಿಂದ ಆಮೂಲಾಗ್ರ ನಿರ್ಗಮನಕ್ಕೆ ವೇದಿಕೆಯಾಗಿದೆ.

ನಾಲ್ಕನೇ ತಲೆಮಾರಿನ ತೇಜಸ್ ಮಾರ್ಕ್–1ಎ ಜೆಟ್‌ಗಳ ಉತ್ಪಾದನೆಯಲ್ಲಿ ಭಾರಿ ವಿಳಂಬಕ್ಕಾಗಿ ಪ್ರಮುಖ ಟೀಕೆಗಳನ್ನು ಎದುರಿಸುತ್ತಿರುವ ಒಂದು ಅಥವಾ ಹೆಚ್ಚಿನ ಖಾಸಗಿ ಆಟಗಾರರೊಂದಿಗೆ ಸಹಭಾಗಿತ್ವದಲ್ಲಿ ಯೋಜನೆಗೆ ಬಿಡ್ ಮಾಡಲಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

ರಕ್ಷಣಾವಲಯದ ಸರ್ಕಾರಿ ಸಂಸ್ಥೆಗಳು ಸುಮಾರು 1.2 ಲಕ್ಷ ಕೋಟಿ ರೂ.ಗಳಿಗೆ 180 ತೇಜಸ್ ಮಾರ್ಕ್–1ಎ ಜೆಟ್‌ಗಳ ಯೋಜಿತ ಉತ್ಪಾದನೆಯೊಂದಿಗೆ "ಈಗಾಗಲೇ ಮುಂದಾಗಿದ್ದು ಇದರ ಜೊತೆಗೆ ಹೊಸ ಮಾದರಿಯ ಯುದ್ಧ ವಿಮಾನ ನಿರ್ಮಾಣಕ್ಕೆ ಭಾರತ ಮುಂದಾಗಿರುವ



ಹಿನ್ನೆಲೆಯಲ್ಲಿ ರಕ್ಷಣಾ ಪಡೆಗಳ ಸಾಮರ್ಥ್ಯ ಹೆಚ್ಚಿಸುವ ಉದ್ದೇಶ ಹೊಂದಲಾಗಿದೆ.

ಸ್ಪರ್ಧಾತ್ಮಕ ಆಧಾರದ ಮೇಲೆ ಖಾಸಗಿ ಮತ್ತು ಸಾರ್ವಜನಿಕ ವಲಯಗಳಿಗೆ ಸಮಾನ ಅವಕಾಶಗಳನ್ನು ಒದಗಿಸುತ್ತದೆ. ಬಿಡ್ ಮಾಡುವವರು, ಸಹಜವಾಗಿ, ದೇಶೀಯ ಕಾನೂನುಗಳು ಮತ್ತು ನಿಯಮಗಳಿಗೆ ಅನುಸಾರವಾಗಿ ಭಾರತೀಯ ಕಂಪನಿಯಾಗಿರಬೇಕು" ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ

ಅವಳಿ–ಎಂಜಿನ್ ಮೂಲಮಾದರಿ ಉತ್ಪಾದಿಸಲು ಸ್ಥಳೀಯ ಪರಿಣತಿ, ಸಾಮರ್ಥ್ಯ ಮತ್ತು ಸಾಮರ್ಥ್ಯವನ್ನು ಬಳಸಿಕೊಳ್ಳುವತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ. ಸ್ಪರ್ಧೆ ಇರುತ್ತದೆ ಎಂದು ರಕ್ಷಣಾ ಸಚಿವಾಲಯ ಮಾಹಿತಿ ಹಂಚಿಕೊಂಡಿದೆ

# ಐಟಿ ರಿಟರ್ನ್ ಸೆ.15ರವರೆಗೆ ವಿಸ್ತರಣೆ




**ನವದೆಹಲಿ, ಮೇ.29–** 2025–26ರ ಆದಾಯ ತೆರಿಗೆ ರಿಟರ್ನ್ (ಐಟಿಆರ್) ಸಲ್ಲಿಸುವ ದಿನಾಂಕವನ್ನು ಆದಾಯ ತೆರಿಗೆ ಇಲಾಖೆಯು ಜು.31ರಿಂದ ಸೆ.15ಕ್ಕೆ ವಿಸ್ತರಿಸಿದೆ.

ತಮ್ಮ ಖಾತೆಗಳನ್ನು ಲೆಕ್ಕಪರಿಶೋಧನೆ ಮಾಡಿಸಿಕೊಳ್ಳುವ ಅಗತ್ಯವಿಲ್ಲದ ವ್ಯಕ್ತಿಗಳು ಮತ್ತು ಸಂಸ್ಥೆಗಳು ಜು.31ರೊಳಗೆ ಆದಾಯ ತೆರಿಗೆ ರಿಟರ್ನ್ ಸಲ್ಲಿಸಬೇಕಾಗಿತ್ತು.

ಅಧಿಸೂಚಿತ ಐಟಿಆರ್‌ಗಳಲ್ಲಿ ಪರಿಚಯಿಸಲಾದ ವ್ಯಾಪಕ ಬದಲಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಐಟಿಆರ್ ವ್ಯವಸ್ಥೆಯ ಸಿದ್ಧತೆ ಮತ್ತು ಬಿಡುಗಡೆಗೆ ಅಗತ್ಯವಿರುವ ಸಮಯವನ್ನು ಪರಿಗಣಿಸಿ, ಅಂತಿಮ ದಿನಾಂಕವನ್ನು ವಿಸ್ತರಿಸಲಾಗಿದೆ.ತೆರಿಗೆದಾರರಿಗೆ ಸುಗಮ ಮತ್ತು ಅನುಕೂಲಕರ ಫೈಲಿಂಗ್ ವ್ಯವಸ್ಥೆ ಮಾಡಿಕೊಡಲು, ಜು. 31ರಂದು ಮೂಲತಃ ನಿಗದಿಯಾಗಿದ್ದ ಐಟಿಆರ್ ಸಲ್ಲಿಸುವ ಅಂತಿಮ ದಿನಾಂಕವನ್ನು ಸೆ.15ರವರೆಗೆ ವಿಸ್ತರಿಸಲು ನಿರ್ಧರಿಸಲಾಗಿದೆ ಎಂದು ಕೇಂದ್ರೀಯ ನೇರ ತೆರಿಗೆ ಮಂಡಳಿ (ಸಿಬಿಡಿಟಿ) ಹೇಳಿಕೆಯಲ್ಲಿ ತಿಳಿಸಿದೆ.

# ವಿಎಚ್‌ಪಿ ಮುಖಂಡ ಶರಣ್ ಬಂಧನಕ್ಕೆ ಆಕ್ರೋಶ

**ಬೆಂಗಳೂರು, ಮೇ 29–** ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆಯ ಸಂದರ್ಭದಲ್ಲಿ ದಕ್ಷಿಣ ಕನ್ನಡ ಜಿಲ್ಲಾ ಬಂದ್‌ಗೆ ಕರೆಕೊಟ್ಟಿದ್ದರ ಆರೋಪದ ಹಿನ್ನಲೆಯಲ್ಲಿ ಬಂಧಿಸಿರುವ ವಿಶ್ವ ಹಿಂದೂ ಪರಿಷತ್ ಮುಖಂಡ ಶರಣ್ ಪಂಪ್‌ವೆಲ್ ಅವರನ್ನು ತಕ್ಷಣವೇ ಬಿಡುಗಡೆ ಮಾಡದಿದ್ದರೆ, ಮುಂದಾಗುವ ಅನಾಹುತಕ್ಕೆ ರಾಜ್ಯ ಸರ್ಕಾರವೇ ನೇರ ಹೊಣೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇರ ಎಚ್ಚರಿಕೆ ಕೊಟ್ಟಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ವಿಶ್ವ ಹಿಂದೂ



ಪರಿಷತ್ ಮುಖಂಡ ಶರಣ್ ಪಂಪ್‌ವೆಲ್ ಅವರನ್ನು ಬಿಡುಗಡೆ ಮಾಡಬೇಕು. ಈ ರೀತಿಯ ಬಂಧನಗಳು ಮತ್ತೆ ಮರುಕಳಿಸಿದ್ದೇ ಆದಲ್ಲಿ ಮುಂದಾಗುವ ಪರಿಣಾಮವನ್ನು ರಾಜ್ಯ ಸರ್ಕಾರವೇ ಎದುರಿಸಬೇಕಾದೀತು ಎಂದು ಗುಡುಗಿದ್ದಾರೆ.

ಮಂಗಳೂರಿನ ಹಿಂದೂ ಕಾರ್ಯಕರ್ತ ಸುಹಾಸ್‌ಶೆಟ್ಟಿ ಅವರ ಹತ್ಯೆಯ ಸಂದರ್ಭದಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಬಂದ್‌ಗೆ ಕರೆ ನೀಡಿರುವುದನ್ನೆ ಕಾರಣವಾಗಿರಿಸಿ ಕೊಂಡು ವಿಶ್ವ ಹಿಂದೂ ಪರಿಷತ್ ಮುಖಂಡ ಶರಣ್ ಪಂಪ್‌ವೆಲ್ ಅವರನ್ನು ಮಂಗಳೂರು ಪೊಲೀಸರು ವಶಕ್ಕೆ ಪಡೆದಿರುವ ಕ್ರಮ ಅತ್ಯಂತ ಖಂಡನೀಯ ಎಂದು ವಾಗ್ದಾಳಿ ನಡೆಸಿದ್ದಾರೆ.

ರಾಜ್ಯದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಲೆಲ್ಲ ಹಿಂದೂಗಳಿಗೆ ರಕ್ಷಣೆ ಸಿಗುತ್ತಿಲ್ಲ, ಅಲ್ಲದೇ ಪೊಲೀಸರ ಮೂಲಕ ಹಿಂದೂ ಕಾರ್ಯಕರ್ತರನ್ನು ಬೆದರಿಸಿ ದಬ್ಬಾಳಿಕೆ ನಡೆಸುವ ಈ ಸರ್ಕಾರವು ಕ್ಷುಲ್ಲಕ ಕಾರಣಕ್ಕಾಗಿ ಬಂಧಿಸುತ್ತಿರುವುದು, ಸುಳ್ಳು ಮೊಕದ್ದಮೆ ದಾಖಲಿಸಿ ಬೆದರಿಸಲು ಮುಂದಾದಂತೆ ಕಾಣುತ್ತಿದೆ ಎಂದು ಆರೋಪಿಸಿದ್ದಾರೆ.

ಓಲೈಕೆ ರಾಜಕಾರಣಕ್ಕಾಗಿ ರಾಷ್ಟ್ರ ವಿರೋಧಿ ಹಾಗೂ ಜಿಹಾದಿ ಶಕ್ತಿಗಳನ್ನು ಪೋಷಿಸಿಕೊಂಡು ಬರುವ ರಾಜ್ಯ ಸರ್ಕಾರ ಪದೇ ಪದೇ ಹಿಂದೂ ಕಾರ್ಯಕರ್ತರು ಹಾಗೂ ಮುಖಂಡರನ್ನು ಕುಗ್ಗಿಸುವ ಕೆಲಸಕ್ಕೆ ಮುಂದಾಗಿರುವುದನ್ನು ಬಿಜೆಪಿ ಕರ್ನಾಟಕ ಸಹಿಸದು ಎಂದು ವಿಜಯೇಂದ್ರ ಹೇಳಿದ್ದಾರೆ.

# ಸಿಎಂ ಸಿದ್ದರಾಮಯ್ಯ ನಡೆಗೆ ವ್ಯಂಗ್ಯ



**ಬೆಂಗಳೂರು, ಮೇ 29–** ಭ್ರಷ್ಟಾಚಾರದ ಪಿತಾಮಹ ಎನಿಸಿಕೊಂಡಿರುವ ಕಾಂಗ್ರೆಸ್ ಪಕ್ಷದ ವಿರುದ್ಧ ಜೀವನವೆಲ್ಲಾ ಹೋರಾಟ ಮಾಡಿ, ನಂತರ ಅಧಿಕಾರಕ್ಕಾಗಿ ಅದೇ ಹುತ್ತದಲ್ಲಿ ಸೇರಿಕೊಂಡಿರುವ ಮಹಾನುಭಾವರು, ಭ್ರಷ್ಟಾಚಾರದ ಬಗ್ಗೆ ಮಾತನಾಡುವುದು ಈ ಶತಮಾನದ ಅತ್ಯಂತ ದೊಡ್ಡ ವಿಪರ್ಯಾಸ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಆಶೋಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಡೆಗೆ ವ್ಯಂಗ್ಯವಾಡಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಮೂಡಾದಲ್ಲಿ ಅಕ್ರಮವಾಗಿ ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ 14 ಸೈಟು ಕಬಳಿಸಿ ಸಿಕ್ಕಿಬಿದ್ದಾಗ ವಾಪಸ್ಸುಕೊಟ್ಟ ಮಹಾನುಭಾವರು, ಮಹರ್ಷಿ ವಾಲಿಕಿ ಅಭಿವೃದ್ಧಿ ನಿಗಮದಲ್ಲಿ ನೂರಾರು ಕೋಟಿ ರೂ.ಅವ್ಯವಹಾರ ಆಗಿದೆ ಎಂದು ವಿಧಾನಸಭೆಯ ಅಧಿವೇಶನದಲ್ಲಿ ಸ್ವತಃ ಒಪ್ಪಿಕೊಂಡ ಮೇಲೂ ಅಧಿಕಾರದಲ್ಲಿ ಮುಂದುವರೆಯುತ್ತಿರುವ ಮಹಾನುಭಾವರು ಎಂದು ಕುಹಕವಾಡಿ ದ್ದಾರೆ.

ಸಿಎಂ ಸಿದ್ದರಾಮಯ್ಯನವರೇ, ತಮ ಆಡಳಿತದಲ್ಲಿ ಕರ್ನಾಟಕ ಭ್ರಷ್ಟಾಚಾರದಲ್ಲಿ ನಂಬರ್ 1 ಆಗಿದೆ ಎಂದು ನಾವಲ್ಲ, ಸ್ವತಃ ತಮ ಕಾಂಗ್ರೆ ಪಕ್ಷದ ಹಿರಿಯ ಶಾಸಕರು, ತಮ ಆರ್ಥಿಕ ಸಲಹೆಗಾರರೂ ಆದ ಬಸವರಾಜ ರಾಯರೆಡ್ಡಿ ಅವರು ತಮಗೆ ಸರ್ಟಿಫಿಕೇಟ್ ಕೊಟ್ಟಿದ್ದಾರೆ. ಅಂಗೈ ಹುಣ್ಣಿಗೆ ಕನ್ನಡಿ ಬೇಕೆ? ಎಂದು ಪ್ರಶ್ನೆ ಮಾಡಿದ್ದಾರೆ.ಅದೆಲ್ಲ ಹೋಗಲಿ ಬಿಡಿ. 2013ರಲ್ಲಿ ತಾವು ಮೊದಲ ಬಾರಿಗೆ ಮುಖ್ಯಮಂತ್ರಿ ಆದಾಗ ಆಗಾಗಲೇ 6 ಬಾರಿ ಶಾಸಕರಾಗಿದ್ದ ಹಾಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ತಮ ಸಂಪುಟಕ್ಕೆ ಯಾಕೆ ಸೇರಿಸಿಕೊಳ್ಳಲಿಲ್ಲ? ಡಿ.ಕೆ.ಶಿವಕುಮಾರ್ ಅವರು ಭ್ರಷ್ಟರು ಎಂಬ ಕಾರಣಕ್ಕೊ ಎಂದು ಪ್ರಶ್ನಿಸಿರುವ ಅವರು, ಈ ಬಗ್ಗೆ ಸ್ಪಷ್ಟನೆ ನೀಡಿ ಎಂದು ಒತ್ತಾಯಿಸಿದ್ದಾರೆ.

# ಸಿನಿಮೀಯ ರೀತಿಯಲ್ಲಿ ಅಮಾಯಕ ವ್ಯಕ್ತಿಯ ಕೊಲೆ

**ಪಠಾಣ್, ಮೇ.29–** ವಿವಾಹಿತ ಮಹಿಳೆ ಮತ್ತು ಆಕೆಯ ಪ್ರಿಯಕರ ಒಂದಾಗಲು ಸಿನಿಮಾ ಶೈಲಿಯಲ್ಲಿ ಅಲೆಮಾರಿ ವ್ಯಕ್ತಿಯೊಬ್ಬನನು ಕೊಂದು, ಶವಕ್ಕೆ ಘಾಗಾ,ರವಿಕೆ ತೊಡಿಸಿ ಬೆಂಕಿ ಹಚ್ಚಿ ಪರಾರಿಯಾಗಲು ಯತ್ನಿಸಿದ ಕುತೂಹಲ ಘಟನೆ ಗುಜರಾತ್‌ನ ಪಠಾಣ್ ಜಿಲ್ಲೆಯಲ್ಲಿ ನಡೆದಿದೆ.ಘಟನೆ ಸಂಬಂಧ ಪಾಲನ್‌ಪುರ ರೈಲು ನಿಲ್ದಾಣದಲ್ಲಿ ಗೀತಾ ಅಹಿರ್ (22) ಮತ್ತು ಆಕೆಯ ಪ್ರಿಯಕರ ಭರತ್ ಅಹಿರ್ (21) ನನ್ನುಪೊಲಸರು ಬಂಧಿಸಿದ್ದಾರೆ.

ಪಠಾಣ್‌ನ ಸಂತಲ್‌ಪುರ ತಾಲ್ಲೂಕಿನ ಜಖೋತ್ರಾ ಗ್ರಾಮದಲ್ಲಿ ಅರ್ಧ ಸುಟ್ಟ ಶವ ಕಳೆದ ರಾತ್ರಿ ಪತ್ತೆಯಾಗಿ ಅದು ಮಹಿಳೆಯೆಂದು ತಿಳಿದು ಅಂತ್ಯ ಸಂಸ್ಕಾರದ ವೇಳೆ ಚಿತ್ರಣ ಬದಲಾಗಿ ಪೊಲೀಸರು ತನಿಖೆ ಕೈಗೊಂಡಾಗ ಅಸಲಿ ಚಿತ್ರ ಬೆಳಕಿಗೆ ಬಂದಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ದೃಶ್ಯಂ ಚಿತ್ರದಿಂದ ಸ್ಪೂರ್ತಿ ಪಡೆದು ನಾನೇ ಸಾವನ್ನಪ್ಪಿರುವ ಹಾಗೆ ಸಂಚು ರೂಪಿಸಿದ್ದು ಗೊತ್ತಾಗಿದೆ.ಜಖೋತ್ರಾದಲ್ಲಿ ತನ್ನ ಪತಿಯೊಂದಿಗೆ ವಾಸಿಸುತ್ತಿರುವ ಗೀತಾ ಇತ್ತಿಚೆಗೆ ಭರತ್ ಅಹಿರ್ ಜೊತೆ ಸಂಭಂಧ ಬೆಳೆಸಿ ಗಂಡನಿಂದ ದೂರಾಗಲು ಈ ಯೋಜನೆಯನ್ನು ರೂಪಿಸಿದ್ದಳು .ಮೃತ ದೇಹವನ್ನು ವ್ಯವಸ್ಥೆ ಮಾಡುವಂತೆ ತನ್ನ ಪ್ರೆಮಿಯನ್ನು ಮನವೊಲಿಸಿ,ಕಳೆದ ರಾತ್ರಿ, ಎಲ್ಲರೂ ಮಲಗಿದ್ದಾಗ ಗೀತಾ ಮನೆಯಿಂದ ಹೊರಗೆ ಬಂದಿದ್ದಳು ನಂತರ, ಅವರ ಪತಿ ಮತ್ತು ಇತರ ಕುಟುಂಬ ಸದಸ್ಯರು ಅವರನ್ನು ಹುಡುಕುತ್ತಿದ್ದಾಗ, ಗ್ರಾಮದ ಹೊರವಲಯದಲ್ಲಿರುವ ಕೊಳದ ಬಳಿ ಅರ್ಧ ಸುಟ್ಟ ಶವ ಬಿದ್ದಿರುವುದು ಕಂಡುಬಂದಿದೆ.ಗೀತಾ ಅವರ ಧರಿಸುತ್ತಿದ್ದ ಘಾಗಾ ಮತ್ತು ಅವರ ಕಾಲುಂಗುರಗಳು ದೇಹದ ಮೇಲೆ ಕಂಡುಬಂದಿದ್ದರಿಂದ, ಅವರ ಸಂಬಂಧಿಕರು ಆರಂಭದಲ್ಲಿ ಅದು ಗೀತಾ ಅವರ ಶವ ಎಂದು ಭಾವಿಸಿದ್ದರು.ಆದಾಗ್ಯೂ, ಶವವನ್ನು ಮನೆಗೆ ತಂದ ನಂತರ, ಮೃತ ದೇಹ ಪುರುಷ ಎಂದು ಗೊತ್ತಾಗಿ ಪೊಲೀಸರಿಗೆ ಮಾಹಿತಿ ನೀಡಿದ ನಂತರ, ಕೊಲೆ ಪ್ರಕರಣವನ್ನು ದಾಖಲಿಸಿ ತನಿಖೆಯನ್ನು ಪ್ರಾರಂಭಿಸಿದ್ದೇವು ಎಂದು ಎಸ್ಪಿ ಹೇಳಿದರು.

ನಂತರ ಮೃತ ವ್ಯಕ್ತಿಯನ್ನು 56 ವರ್ಷದ ಹರ್ಜಿಭಾಯ್ ಸೋಲಂಕಿ ಎಂದು ಗುರುತಿಸಲಾಯಿತು, ಅವರು ಸಂತಲ್ಪುರ್ ತಾಲ್ಲೂಕಿನ ಪಕ್ಕದ ವೌವಾ ಗ್ರಾಮದಲ್ಲಿ ಅಲೆಮಾರಿ ಜೀವನ ನಡೆಸುತ್ತಿದ್ದರು ಎಂದು ನಾಯ್ ಹೇಳಿದ್ದಾರೆ.ಗೀತಾ–ಭರತ್‌ನನ್ನುಇಬ್ಬರೂ ರೈಲಿನಲ್ಲಿ ರಾಜಸ್ಥಾನಕ್ಕೆ ಪಲಾಯನ ಮಾಡುತ್ತಿದ್ದಾಗ ಮಾಹಿತಿ ಪಡೆದ ಪೊಲೀಸ್ ತಂಡವು ಅವರಿಬ್ಬರನ್ನೂ ಪಾಲನ್‌ಪುರ ರೈಲು ನಿಲ್ದಾಣದಲ್ಲಿ ಬಂಧಿಸಿತು, ಅಲ್ಲಿ ಅವರು ರಾಜಸ್ಥಾನಕ್ಕೆ ಹೋಗುವ ರೈಲಿಗಾಗಿ ಕಾಯುತ್ತಿದ್ದರು.ಗೀತಾ ದೃಶ್ಯಂ ಮತ್ತು ದೃಶ್ಯಂ 2 ಚಲನಚಿತ್ರಗಳನ್ನು ನೋಡಿದ್ದರಿಂದ, ತನ್ನ ಜೀವನದ ಉಳಿದ ಭಾಗವನ್ನು ಭರತ್‌ನೊಂದಿಗೆ ಕಳೆಯಲು ತನ್ನ ಸಾವಿನ ನಕಲಿ ಮಾಡಲು ಈ ಯೋಜನೆಯನ್ನು ರೂಪಿಸಿದಳು ಎಂದು ನಮಗೆ ತಿಳಿಸಿದಳು, ಭರತ್ ತನ್ನ ಯೋಜನೆಯಂತೆ ವರ್ತಿಸಲು ಒಪ್ಪಿಕೊಂಡನು ಮತ್ತು ಕೊಲೆಗಾಗಿ ಪುರುಷ ಅಥವಾ ಮಹಿಳೆಯನ್ನು ಹುಡುಕಲು ಪ್ರಾರಂಭಿಸಿದನು. ಮೇ 26 ರಂದು, ಅವನು ಸೋಲಂಕಿಯನ್ನು ಗುರುತಿಸಿ ಅವನ ಮೋಟಾರ್ ಸೈಕಲ್‌ನಲ್ಲಿ ಅವನಿಗೆ ಲಿಫ್ ನೀಡಿದನು ಎಂದು ಎಸ್‌ಪಿ ಹೇಳಿದರು.ಭರತ್ ತನ್ನ ವಾಹನವನ್ನು ನಿರ್ಜನ ಸ್ಥಳದಲ್ಲಿ ನಿಲ್ಲಿಸಿ ಸೋಲಂಕಿಯನ್ನು ಕತ್ತು ಹಿಸುಕಿ ಕೊಲೆ ಮಾಡಿ, ನಂತರ ಜಖೋತ್ರಾದ ಕೊಳದ ಬಳಿ ಶವವನ್ನು ತೆಗೆದುಕೊಂಡು ಹೋದರು ಎಂದು ಅಧಿಕಾರಿ ತಿಳಿಸಿದ್ದಾರೆ.

ಯೋಜನೆಯಂತೆ, ಗೀತಾ ಮಂಗಳವಾರ ರಾತ್ರಿ ಎಲ್ಲರೂ ಮಲಗಿದ್ದಾಗ ತನ್ನ ಮನೆಯಿಂದ ಓಡಿಹೋಗಿ ಪೆಟ್ರೋಲ್ ಬಾಟಲಿಯೊಂದಿಗೆ ಸ್ಥಳಕ್ಕೆ ತಲುಪಿದಳು.ಅವರು ಮೊದಲು ಗೀತಾಳ ಘಾಗ್ರಾ ಮತ್ತು ಕಾಲುಂಗುರಗಳನ್ನು ಸೋಲಂಕಿಯ ಮೃತ ದೇಹದ ಮೇಲೆ ಹಾಕಿ, ಅವಳು ತಂದಿದ್ದ ಪೆಟ್ರೋಲ್ ಬಳಸಿ ಬೆಂಕಿ ಹಚ್ಚಿದರು.

# ಟ್ರ್ಯಾಕ್ಟರ್ ಉರುಳಿ ರೈತ ಸಾವು



**ದೊಡ್ಡಬಳ್ಳಾಪುರ, ಮೇ.29–** ಜಮೀನು ಉಳುಮೆ ಮಾಡುವ ವೇಳೆ ನಿಯಂತ್ರಣ ಕಳೆದುಕೊಂಡ ಟ್ರ್ಯಾಕ್ಟರ್ ಪಲ್ಟಿಯಾಗಿ ರೈತ ಸ್ಥಳದಲ್ಲಿಯೇ ಸಾವನ್ನಪ್ಪಿರುವ ದುರ್ಘಟನೆ ತಾಲೂಕಿನ ಚೆನ್ನಾಪುರ ಬಳಿ ನಡೆದಿದೆ.

ಮೃತರನ್ನು ಚೆನ್ನಾಪುರ ಗ್ರಾಮದ ನಿವಾಸಿ (50) ವರ್ಷದ ಚಂದ್ರಪ್ಪ ಎಂದು ಗುರುತಿಸಲಾಗಿದೆ. ಬೆಳಿಗ್ಗೆ ತನ್ನ ಸ್ವಂತ ಜಮೀನಿನಲ್ಲಿ ಉಳುಮೆ ಮಾಡುವಾಗ ಬದುವಿನ ಇಳಿಜಾರಿಗೆ ಇಳಿದ ಟ್ರ್ಯಾಕ್ಟರ್ ಚಕ್ರ ಜಾರಿದ ಪರಿಣಾಮ ನಿಯಂತ್ರಣ ಕಳೆದುಕೊಂಡು ಟ್ರ್ಯಾಕ್ಟರ್ ಪಲ್ಟಿಯಾಗಿದೆ.

ಘಟನೆಯಲ್ಲಿ ಚಂದ್ರಪ್ಪ ಟ್ರ್ಯಾಕ್ಟರ್ ಕೆಳಗೆ ಸಿಲುಕಿ ಸ್ಥಳದಲ್ಲಿಯೇ ಸಾವನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕೆರೆಗೆ ಬಿದ್ದು ಯುವತಿ ಸಾವು

**ಕಲಬುರಗಿ,ಮೇ.29–**ಹೊಟ್ಟೆ ನೋವು ತಾಳದೆ ಕೆರೆಗೆ ಬಿದ್ದು ಯುವತಿಯೊಬ್ಬಳು ಸಾವನ್ನಪ್ಪಿರುವ ಘಟನೆ ಹತಗುಂದಾ ಗ್ರಾಮದಲ್ಲಿ ನಡೆದಿದೆ.

ಯಳವಂತಗಿ (ಕೆ) ಗ್ರಾಮದ ಶಾಂತಾಬಾಯಿ ತಂದೆ ಶಿವಣ್ಣ ನಾಯಿಕೋಡಿ ಸಾವನ್ನಪ್ಪಿರುವ ಯುವತಿ.

ಪಟ್ಟಣ ಗ್ರಾಮ ಪಂಚಾಯತಿಯಲ್ಲಿ ಕೆಲಸ ಮಾಡುತ್ತಿದ್ದ ಶಾಂತಬಾಯಿ ಕಳೆದ ಹಲವಾರು ದಿನಗಳಿಂದ ಹೊಟ್ಟೆ ನೋವಿನಿಂದ ಬಳಲುತ್ತಿದ್ದಳು. ಚಿಕಿತ್ಸೆ ಕೊಡಿಸಿದ್ದರೂ ಪ್ರಯೋಜನವಾಗಿರಲಿಲ್ಲ. ಇದರಿಂದ ಜೀವನದಲ್ಲಿ ಜಿಗುಪ್ಸೆಗೊಂಡು ಕೆರೆಯಲ್ಲಿ ಬಿದ್ದು ಸಾವನ್ನಪ್ಪಿದ್ದಾಳೆ ಎಂದು ತಿಳಿದುಬಂದಿದೆ.

ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಯುವ ಮಾರ್ಗ

ಗುರುವಾರ : 29–05–2025

# ಪ್ರಿಯಾಂಕ್‌ಗೆ ನಿಂದನೆ: ಅಜಯಸಿಂಗ್ ಖಂಡನೆ

**ಕಲಬುರಗಿ.ಮೇ.29–**ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆಗೆ ಮೇಲ್ಮನೆ ಬಿಜೆಪಿ ವಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ಅವರು ಅಸಂಸದೀಯ ಪದ ಬಳಸಿ ಮಾಡಿದರು ಎನ್ನಲಾದ ನಿಂದನೆಗೆ ಕೆಕೆಆಡಿಬಿ ಅಧ್ಯಕ್ಷ ಡಾ. ಅಜಯ್ ಸಿಂಗ್ ಕಟುವಾದ ಶಬ್ದಗಳಲ್ಲಿ ಖಂಡಿಸಿದ್ದಾರೆ.



ಬಿಜೆಪಿ ನಾಯಕರು ಆಡು ಭಾಷೆಯಲ್ಲಿ ಗಾದೆ ಮಾತು ಹೇಳಿದ್ದೇವೆ ಎಂದು ಸಚಿವರನ್ನು ಶ್ವಾನಕ್ಕೆ ಹೋಲಿಕೆ ಮಾಡಿ ಜರಿದಿದ್ದಾರೆ, ಇದು ಅಕ್ಷಮ್ಯ ಅಪರಾಧ, ನಂತರ ಕಲಬುರಗಿ ಹೋರಾಟದಲ್ಲಿಯೂ ರಿಪಬ್ಲಿಕ್ ಆಫ್ ಕಲಬುರಗಿ ಮಾಡಿದ್ದಾರೆಂದು ಆರೋಪಿಸಿದ್ದಾರೆ. ಇದು ಶುದ್ಧ ಸುಳ್ಳು, ಕಲಬುರಗಿ ಜನರಿಗೆ ಕಾಂಗ್ರೆಸ್ ಇತಿಹಾಸ ಗೊತ್ತಿದೆ. ನಮ್ಮ ಪಕ್ಷ ಅಧಿಕಾರದಲ್ಲಿ ಇದ್ದಾಗ ಅಭಿವೃದ್ಧಿ ನಡೆದಿದೆಯೇ ವಿನಹಃ ಬೇರಾವ ಕೆಲಸಗಳು ನಡೆದಿಲ್ಲವೆಂದು ಸ್ಪಷ್ಟಪಡಿಸಿದ್ದಾರೆ.

ಯಾರೇ ಆಗಲಿ ವೈಯಕ್ತಿಕ ಟೀಕೆಗಳಿಗೆ ಮುಂದಾಗಲೇಬೇರಾದು. ಚಿತ್ತಾಪುರ ಘಟನೆ ಸರಿ ತಪ್ಪೊ ಎಂದು ನಿರ್ಧರಿಸೋದಕ್ಕಿಂತ ಅದು ಜನರ ಆ ಕ್ಷಣದ ಸ್ವಾಭಾವಿಕ ಆಕ್ರೋಶ ಆಗಿತ್ತು. ಹಾಗಂತ ಆ ಘಟನೆಗೆ ಪ್ರಿಯಾಂಕ್ ಅವರೇ ಪ್ರೇರಣೆ ಎಂದು ಆರೋಪಿಸುವು ಎಷ್ಟು ಸರಿ ಪೊಲೀಸರು ಭದ್ರತೆ ದೃಷ್ಟಿಯಿಂದ ತಮ್ಮ ಕೆಲಸ ಮಾಡಿದ್ದಾರೆ. ಇಡೀ ವ್ಯವಸ್ಥೆಯನ್ನೇ ಮನ ಬಂದಂತೆ ಟೀಕಿಸುವ ಬಿಜೆಪಿಗರದ್ದು ಮಿಥ್ಯಾರೋಪ. ಸಾರ್ವಜನಿಕ ಬದುಕಲ್ಲಿ ನಮ್ಮ ನಡೆ ನುಡಿ ಯಾರಿಗೂ ನೋವು ತರದಂತೆ ಸ್ಪಷ್ಟ ಆಗಿರಬೇಕು ಎಂದು ಡಾ ಅಜಯ್ ಸಿಂಗ್ ಹೇಳಿದ್ದಾರೆ.

# ಗ್ಲೋಬಲ್ ಅಚೀವರ್ಸ್ ಪ್ರಶಸ್ತಿ ಪ್ರದಾನ

**ಕಲಬುರಗಿ,ಮೇ.29–** ಆಧುನಿಕ ಕೃಷಿ ಮತ್ತು ಸಮಾಜ ಸೇವೆ ಕ್ಷೇತ್ರದಲ್ಲಿ ಅದ್ವಿತೀಯ ಸಾಧನೆ ಮಾಡಿರುವ ಕಲಬುರಗಿ ಜಿಲ್ಲೆಯ ಹನುಮಂತರಾವ್ ಭೂಸನೂರ್ ಅವರಿಗೆ ಇತ್ತೀಚೆಗೆ ಜಾರ್ಜಿಯಾ ದೇಶದ ರಾಜಧಾನಿ ಟಿಬಿಲಿಸಿಯಲ್ಲಿ ಏರ್ಪಡಿಸಲಾಗಿದ್ದ ಅಂತರರಾಷ್ಟ್ರೀಯ ಸಾಧಕರ ಸಮ್ಮೇಳನದಲ್ಲಿ ಗ್ಲೋಬಲ್ ಅಚೀವರ್ಸ್ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.



ಜಾರ್ಜಿಯಾ ಮತ್ತು ಭಾರತ ದೇಶಗಳ ಅನೇಕ ಗಣ್ಯರ ಸಮ್ಮುಖದಲ್ಲಿ ನಡೆದ ಈ ಸಮಾರಂಭದಲ್ಲಿ, ಹನುಮಂತರಾವ್ ಅವರ ಸಾಧನೆಯನ್ನು ಬಿಂಬಿಸುವ ಕಿರು ಚಿತ್ರವನ್ನೂ ಪ್ರದರ್ಶಿಸಲಾಯಿತು.

# ವೀರ ಸಾವರ್ಕರ್ ಜನ್ಮದಿನ : ನಮನ ಸಲ್ಲಿಸಿದ ಪ್ರಧಾನಿ



**ನವದೆಹಲಿ, ಮೇ 29–** ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಹಿಂದುತ್ವದ ಪ್ರತಿಪಾದಕ ವೀರ ಸಾವರ್ಕರ್ ಅವರಿಗೆ ಅವರ ಜನ್ಮದಿನದಂದು ಶ್ರದ್ಧಾಂಜಲಿ ಸಲ್ಲಿಸಿದರು. ರಾಷ್ಟ್ರವು ಅವರ ಅದಮ್ಯ ಧೈರ್ಯ ಮತ್ತು ಹೋರಾಟದ ಗಾಥೆಯನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಮೋದಿ ಹೇಳಿದ ರು.

ಭಾರತ ಮಾತೆಯ ನಿಜವಾದ ಪುತ್ರ ಎಂದು ಅವರನ್ನು ಶ್ಲಾಘಿಸಿದ ಮೋದಿ, ವಸಾಹತುಶಾಹಿ ಬ್ರಿಟಿಷ್ ಶಕ್ತಿಯಿಂದ ಬಂದ ಅತ್ಯಂತ ಕಠಿಣ ಚಿತ್ರಹಿಂಸೆಗಳು ಸಹ ಮಾತೃಭೂಮಿಗೆ ಅವರ ಸಮರ್ಪಣೆಯನ್ನು ಕಡಿಮೆ ಮಾಡಲು ಸಾಧ್ಯವಿಲ್ಲ ಮತ್ತು ಅವರ ತ್ಯಾಗ ಮತ್ತು ಬದ್ಧತೆ ಅಭಿವೃದ್ಧಿ ಹೊಂದಿದ ಭಾರತದ ನಿರ್ಮಾಣಕ್ಕೆ ದಾರಿದೀಪವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು.

1883 ರಲ್ಲಿ ಮಹಾರಾಷ್ಟ್ರದಲ್ಲಿ ಜನಿಸಿದ ಸಾವರ್ಕರ್ ಅವರು ಅತ್ಯಂತ ಕಠಿಣ ಪರಿಸ್ಥಿತಿಗಳಲ್ಲಿ ಅಂಡಮಾನ್ ದ್ವೀಪಗಳಲ್ಲಿ ಜೈಲು ಶಿಕ್ಷೆ ಅನುಭವಿಸುವ ಮೊದಲು ಬ್ರಿಟಿಷ್ ಸಾಮ್ರಾಜ್ಯದಿಂದ ಸ್ವಾತಂತ್ರ್ಯ ಪಡೆಯಲು ಕ್ರಾಂತಿಕಾರಿ ವಿಧಾನಗಳ ಪ್ರತಿಪಾದಕ ರಾಗಿದ್ದರು. ಹಿಂದೂ ರಾಷ್ಟ್ರೀಯವಾದಿಗಳಿಗೆ ನಾಯಕರಾಗಿರುವ ಅವರು ಹಿಂದುತ್ವದ ರಾಜಕೀಯ ಚೌಕಟ್ಟನ್ನು ಅಭಿವೃದ್ಧಿಪಡಿಸಿದ ಕೀರ್ತಿಗೆ ಪಾತ್ರರಾಗಿದ್ದಾರೆ ಮತ್ತು ಒಬ್ಬ ಸಮೃದ್ಧ ಲೇಖಕ ಮತ್ತು ಕವಿಯಾಗಿದ್ದರು. ಹಿಂದುತ್ವದ ಪ್ರತಿಪಾದನೆ ಗಾಗಿ ಕಾಂಗ್ರೆಸ್‌ನಂತಹ ಜಾತ್ಯತೀತ ಪಕ್ಷಗಳಿಂದ ಟೀಕಿಸಲ್ಪಟ್ಟ ಸಾವರ್ಕರ್ ಅವರು ಆಡಳಿ ತಾರೂಢ ಬಿಜೆಪಿಗೆ ಪೂಜ್ಯ ವ್ಯಕ್ತಿಯಾಗಿ ದ್ದಾರೆ.

# ಒಳ ಮೀಸಲಾತಿ ಸಮೀಕ್ಷೆ ಲೋಪದೋಷ ಸರಿಪಡಿಸಲು ಮಾದಿಗ ಯುವ ಸೇನೆ ಒತ್ತಾಯ




**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಮೇ.29–** ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿಗಾಗಿ ನಡೆಯುತ್ತಿರುವ ಸಮೀಕ್ಷೆಯಲ್ಲಿ ಆಗಿರುವ ಲೋಪದೋಷಗಳನ್ನು ಸರಿಪಡಿಸುವಂತೆ ಮಾದಿಗ ಯುವ ಸೇನೆ ಹಟ್ಟಿ ಕಾರ್ಯಕರ್ತರು ಸಹಾಯಕ ಆಯುಕ್ತರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿಗಾಗಿ ರಾಜ್ಯಾದ್ಯಂತ ನಡೆದಿರುವ ಜಾತಿ ಗಣತಿ ಸಮೀಕ್ಷೆಯಲ್ಲಿ ಹಲವು ಲೋಪದೋಷಗಳು ಕಂಡು ಬಂದಿವೆ. ಈಗಾಗಲೇ ಶೇ. 90% ರಷ್ಟು ಗಣತಿ ಮುಗಿದಿದೆ. ಶೇ. 100% ರಷ್ಟು ಗಣತಿ ಮುಗಿದಿದೆ ಎಂದು ಗಣತಿದಾರರು ಹೇಳುತ್ತಿದ್ದಾರೆ. ಆದರೆ ಮಾದಿಗ ಜಾಗೃತಿ ಯುವ ಸೇನೆಯ ಪದಾಧಿಕಾರಿಗಳು ಹಟ್ಟಿ ಪಟ್ಟಣದ ಕೆಲ ವಾರ್ಡ್‌ಗಳಿಗೆ ಭೇಟಿ ನೀಡಿ ವಿಚಾರಿಸಿದಾಗ ಹಲವಾರು ಮಾದಿಗ ಸಮುದಾಯದ ಸದಸ್ಯರ ಹೆಸರುಗಳು ಗಣತಿಯಲ್ಲಿ ನೊಂದಣಿಯಾಗಿರುವುದಿಲ್ಲ.

ಉದಾಹರಣೆಗೆ ಹಟ್ಟಿ ಪಟ್ಟಣದ ಗಾಂಧಿ ಮೈದಾನದ 54 ಮನೆಗಳಲ್ಲಿ ಮಾದಿಗ ಸಮುದಾಯದ 157, ಜತ್ತಿ ಕಾಲೋನಿಯ 23 ಮನೆಗಳಲ್ಲಿ 72, ಅಬ್ದುಲ್ಲಾ ಕಾಲೋನಿಯ 31 ಮನೆಗಳಲ್ಲಿ 45 ಹಾಗೂ ಡಾ॥ ಬಿ.ಆರ್. ಅಂಬೇಡ್ಕರ್ ನಗರದ 8 ಮನೆಗಳಲ್ಲಿ 25 ಮಾದಿಗ ಸಮುದಾಯದ ಸದಸ್ಯರ ಹೆಸರು ನೊಂದಣಿಯಾಗಿಲ್ಲ.

ಆಧಾರ್ ಕಾರ್ಡ್ ಇಲ್ಲದೇ ಇರುವುದು, ವಿಳಾಸ ಬದಲಾವಣೆ, ಅಂತರ್‌ಜಾತಿಯ ವಿವಾಹ, ರೇಷನ್ ಕಾರ್ಡ್ ಸಮಸ್ಯೆ ಸೇರಿ ಹಲವು ತಾಂತ್ರಿಕ ಸಮಸ್ಯೆಗಳು ಸಮೀಕ್ಷೆಗೆ ಅಡಚಣೆ ಉಂಟಾಗುತ್ತಿದೆ. ಆಧಾರ್ ಕಾರ್ಡ್ ಇಲ್ಲದಿದ್ದರೆ 12 ಬಾರಿ 'X' ಅಥವಾ '9' ಎಂದು ನಮೂದಿಸಿ ನೊಂದಾಯಿಸಬಹುದು. ಆದರೆ ಗಣತಿದಾರರು ಆಧಾರ್ ಕಾರ್ಡ್ ಇಲ್ಲದಿದ್ದರೆ ನೊಂದಾಯಿಸಲು ಬರುವುದಿಲ್ಲ. ನಮಗೆ ತರಬೇತಿಯಲ್ಲಿ ಆಧಾರ್ ಕಾರ್ಡ್ ಬರುವುದಿಲ್ಲವೆಂದು ಹೇಳುತ್ತಿದ್ದಾರೆ.

ಈ ಕಾರಣಗಳಿಂದ ರಾಜ್ಯಾದ್ಯಂತ ಲಕ್ಷಾಂತರ ಮಾದಿಗ ಸಮುದಾಯದ ಜನರು ಜಾತಿ ಗಣತಿ ಯಲ್ಲಿ ನೊಂದಣಿಯಾಗದೇ ವಂಚಿತರಾಗುತ್ತಿದ್ದಾರೆ. ಇದೇ ಜಾತಿ ಮುಕ್ತಾಯಗೊಳಿಸಿ, ಸರ್ಕಾರಕ್ಕೆ ವರದಿ ಒಪ್ಪಿಸಿದರೆ ರಾಜ್ಯದಲ್ಲಿ ಮಾದಿಗರ ಸಂಖ್ಯೆ ಕಡಿಮೆಯಾಗುತ್ತದೆ.

ಮಾದಿಗ ಸಮುದಾಯಕ್ಕೆ ಸಾಂವಿಧಾನಿಕವಾಗಿ ದೊರೆಯಬೇಕಾದ ಒಳ ಮೀಸಲಾತಿಯ ಪಾಲು ಕಡಿಮೆಯಾಗುತ್ತದೆ. ಕೂಡಲೇ ಗಣತಿದಾರರಿಗೆ ಯಾವುದೇ ಮನೆಯ ಯಾವುದೇ ಸದಸ್ಯರನ್ನು ತಪ್ಪಿಸದೇ, ನಿಖರವಾಗಿ ಗಣತಿ ಮಾಡುವಂತೆ ಸೂಕ್ತ ನಿರ್ದೇಶನ ನೀಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸಂಘಟನೆ ಅಧ್ಯಕ್ಷ ವಿಜಯಕುಮಾರ ಬಿ.ಹೆಚ್. ಉಪಾಧ್ಯಕ್ಷ ಶರಣಬಸವ ಗಂಟೇರ್, ದಲಿತ ಸಂರಕ್ಷ ಸಮಿತಿ ಅಧ್ಯಕ್ಷ ಮೋಹನ್ ಗೋಸ್ಲೆ, ಯಮನೂರ ಕಟ್ಟಿಮನಿ, ಯಲ್ಲಪ್ಪ ಮಾಚನೂರು, ವಿನೋದ ಕಮಲದಿನ್ನಿ,ಬಸವರಾಜ ಟೇಲರ್,ಶಿವಕುಮಾರ, ದಯಾನಂದ, ಬಸವರಾಜ, ಮೌನೇಶ್ ಗೋರೇಬಾಳ ಇದ್ದರು.

# ಸೈನಿಕರು, ರೈತರು, ವೈದ್ಯರು, ಶಿಕ್ಷಕರು ತಂದೆ–ತಾಯಿಯಷ್ಟೆ ಸ್ಮರಣೀಯರು:ಸಿಎಂ



**ಬೆಂಗಳೂರು ಮೇ 29–** ಸೈನಿಕರು, ರೈತರು, ವೈದ್ಯರು, ಶಿಕ್ಷಕರು ನಮ ತಂದೆ ತಾಯಿಯಷ್ಟೆ ಸರಣೀಯರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು. ಪುರಭವನದಲ್ಲಿ ಆಯೋಜಿಸಿದ್ದ ಬೃಹತ್ ಜೈ ಹಿಂದ್ ಸಭಾ ಕಾರ್ಯಕ್ರಮದಲ್ಲಿ ಭಾರತೀಯ ಯೋಧರ ಪರಂಪರೆಯನ್ನು ಶ್ಲಾಘಿಸಿ, ನಿವೃತ್ತ ಯೋದ ಸಮೂಹವನ್ನು ಸನಾನಿಸಿ, ಹುತಾತ ಯೋಧರ ಕುಟುಂಬದ ಸದಸ್ಯರನ್ನು ಸನಾನಿಸಿ ಪುರಸ್ಕರಿಸಿ ಅವರು ಮಾತನಾಡಿದರು.

ತ್ಯಾಗ ಮನೋಭಾವದಿಂದ ಯೋದರು ದೇಶ ರಕ್ಷಣೆಯಲ್ಲಿ ತೊಡಗಿದ್ದಾರೆ. ದೇಶದ ರಕ್ಷಣೆ ಕೇವಲ ಯೋಧರ ಜವಾಬ್ದಾರಿಯಲ್ಲ. 140 ಕೋಟಿ ಭಾರತೀಯರ ಜವಾಬ್ದಾರಿ. ಶಿಷ್ಟ ರಕ್ಷಣೆ–ದುಷ್ಟರ ಸಂಹಾರದ ವಿಚಾರದಲ್ಲಿ ಭಾರತ ತನ್ನ ಇತಿಹಾಸದಲ್ಲೇ ಯಾವತ್ತೂ ರಾಜಿ ಆಗಿಲ್ಲ. ಮುಂದೆಯೂ ಆಗುವುದಿಲ್ಲ.

ಇದು ಪ್ರತಿಯೊಬ್ಬ ಭಾರತೀಯರ ಬದ್ಧತೆ ಎಂದು ಅವರು ಶ್ಲಾಘಿಸಿದರು.ಯೋಧರ ಕ್ಯಾಂಟೀನ್‌ಗೆ ಅಬಕಾರಿ ಸುಂಕ ಹಾಕುವುದಿಲ್ಲ ಎಂದು ಇದೇ ಸಂದರ್ಭದಲ್ಲಿ ಸಿಎಂ ಘೋಷಣೆ ಮಾಡಿದರು. ಹಾಗೆಯೇ ನಿವೃತ್ತ ಯೋಧರ ಕಲ್ಯಾಣಕ್ಕೆ ಅಗತ್ಯ ಕ್ರಮಗಳನ್ನೆಲ್ಲಾ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೆವಾಲ, ಸಿಎಂ ಸಿದ್ದರಾಮಯ್ಯ, ಲೆ.ಜ. ಪ್ರಸಾದ್, ಏರ್ ವೈಸ್ ಮಾಷರ್ಲ್ ಅಜೀಜ್ ಜಾವೆದ್, ಎಐಸಿಸಿ ಕಾರ್ಯದರ್ಶಿ ನಾಸೀರ್ ಹುಸೇನ್, ಕೆಪಿಸಿಸಿ ಸೇನಾ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ್ ಭಾಗವಹಿಸಿದ್ದರು.

# ನಟ ಕಮಲ್ ಹಾಸನ್ ವಿರುದ್ಧ ಕನ್ನಡಿಗರ ಆಕ್ರೋಶ

**ಬೆಂಗಳೂರು, ಮೇ 29–** ಥಗ್ ಲೈಫ್ ಚಿತ್ರದ ಪ್ರಚಾರಕ್ಕಾಗಿ ಬೆಂಗಳೂರಿಗೆ ಆಗಮಿಸಿದ ಸಂದರ್ಭ ದಲ್ಲಿ ತಮಿಳಿನಿಂದ ಕನ್ನಡ ಹುಟ್ಟಿದ್ದು ಎಂದ ವಿವದತ್ಮಾಕ ಹೇಳಿಕೆ ನೀಡಿ ಸ್ವಾಭಿಮಾನಿ ಕನ್ನಡಿಗರ ಆಕ್ರೋಶಕ್ಕೆ ತುತ್ತಾಗಿರುವ ದಕ್ಷಣ ಭಾರತದ ಹೆಸರಾಂತ ಚಿತನಟ ಕಮಲ್ ಹಾಸನ್ ಕೂಡಲೇ ಬೇಷರತ್ ಕ್ಷಮೆ ಕೇಳಬೇಕು ಎಂದು ಕನ್ನಡ ಪರ ಸಂಘಟನೆಗಳು ಆಕ್ರೋಶ ಹೊರಹಾಕಿವೆ. ಪ್ರತಿಪಕ್ಷ ಬಿಜೆಪಿ, ಕರವೇ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಸೇರಿದಂತೆ ಮತ್ತಿತರ ಸಂಘಟನೆಗಳು ಕಮಲ್ ಹಾಸನ್ ಕೂಡಲೇ ಕ್ಷಮೆ ಕೇಳದಿದ್ದರೆ,

ಕರ್ನಾಟಕದಲ್ಲಿ ಅವರ ಯಾವುದೇ ಚಿತ್ರಗಳ ಬಿಡುಗಡೆಗೆ ಅವಕಾಶ ಕೊಡುವುದಿಲ್ಲ ಎಂದು ಎಚ್ಚರಿಕೆ ಕೊಟ್ಟಿವೆ. ತಮಿಳಿನಿಂದ ಕನ್ನಡ ಹುಟ್ಟಿದ್ದು ಎಂದು ಮಾತನಾಡಿದ್ದ ಕಮಲ್ ಹೇಳಿಕೆಗೆ ಕನ್ನಡಪರ ಸಂಘಟನೆಗಳು ಕ್ಷಮೆ ಯಾಚಿಸುವಂತೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.ಕನ್ನಡ ಭಾಷೆಗೆ 4ರಿಂದ 5 ಸಾವಿರ ವರ್ಷಗಳ ಇತಿಹಾಸವಿದೆ. ಅವರು ಆಡಿದ ಮಾತಿನಿಂದ ದ್ರಾವಿಡ ಭಾಷೆಗಳು ಒಗ್ಗಟ್ಟಿಗೆ ದಕ್ಕೆಯಾಗಿದೆ. ಕಮಲ್ ಅತ್ಯುತ್ತಮ ಕಲಾವಿದ, ಅವರು ಕನ್ನಡ ಚಿತ್ರಗಳಲ್ಲೂ ನಟಿಸಿದ್ದಾರೆ. ನಟನ ಮಾತಿನಿಂದ ಕನ್ನಡಿಗರು, ತಮಿಳರ ನಡುವೆ ದ್ವೇಷ ಹುಟ್ಟುವಂತೆ ಮಾಡಿದ್ದಾರೆ. ತಕ್ಷಣ ತಮ ತಪ್ಪನ್ನು ಅವರು ತಿದ್ದುಕೊಂಡು ಕನ್ನಡಿಗರಿಗೆ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ. ಕ್ಷಮೆಯಾಚಿಸದಿದ್ದರೆ ಥಗ್ ಲೈಫ್‌ಚಿತ್ರದ ರಿಲೀಸ್‌ಗೆ ತಡೆ ನೀಡೋದಾಗಿ ಕರವೇ ಮತ್ತು ಕನ್ನಡಪರ ಸಂಘಟನೆ ಎಚ್ಚರಿಸಿದೆ. ಕಮಲ್ ಆಡಿರುವ ಮಾತುಗಳು ಸೋಷಿಯಲ್ ಮೀಡಿಯಾದಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ.



ಕನ್ನಡ ತಮಿಳಿನಿಂದ ಬಂದಿಲ್ಲ. ತಮಿಳಿಗಿಂತ ಕನ್ನಡ ಭಾಷೆಯೇ ಪುರಾತನವಾದದ್ದು ಎಂದು ಕನ್ನಡಿಗರು ತರಾಟೆಗೆ ತೆಗೆದುಕೊಂಡಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ಕಮಲ್ ಹಾಸನ್ ವಿರುದ್ಧ ತೀವ್ರವಾಗಿ ಕಿಡಿಕಾರಿದ್ದಾರೆ. ಮಾತೃಭಾಷೆಯನ್ನು ಪ್ರೀತಿಸಬೇಕು, ಆದರೆ, ಅದರ ಹೆಸರಿನಲ್ಲಿ ದುರಭಿಮಾನ ಮೆರೆಯುವುದು ಸಂಸ್ಕೃತಿ ಹೀನ ನಡವಳಿಕೆಯಾಗುತ್ತದೆ. ಅದರಲ್ಲೂ ಕಲಾವಿದರಿಗೆ ಪ್ರತಿಯೊಂದು ಭಾಷೆಯನ್ನೂ ಗೌರವಿಸುವ ಸಂಸ್ಕಾರ ಇರಬೇಕು. ಕನ್ನಡವೂ ಸೇರಿದಂತೆ ಅನೇಕ ಭಾರತೀಯ ಭಾಷೆಗಳಲ್ಲಿ ನಟಿಸಿರುವ ನಟ ಕಮಲ್ ಹಾಸನ್ ತಮ್ಮ ತಮಿಳು ಭಾಷೆಯನ್ನು ವೈಭವಿಕರಿಸುವ ಮತ್ತಿನಲ್ಲಿ ನಟ ಶಿವರಾಜ್ ಕುಮಾರ್ ಅವರನ್ನೂ ಕುಳ್ಳಿರಿಸಿಕೊಂಡು ಕನ್ನಡವನ್ನು ಅವಮಾನಿಸಿರುವುದು ಉದ್ಧಟತನ ಹಾಗೂ ದುರಹಂಕಾರದ ಪರಮಾವಧಿಯಾಗಿದೆ ಎಂದು ಕಿಡಿಕಾರಿದ್ದಾರೆ.

# ಐಇಸಿ ಚಟುವಟಿಕೆಗೆ ಅರ್ಜಿ ಆಹ್ವಾನ

**ರಾಯಚೂರು,ಮೇ.29–** ಇಲ್ಲಿನ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ 35 ವಾರ್ಡಗಳಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ನಡಿ 3 ವರ್ಷಗಳ ಅವಧಿಗೆ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ಡೇ–ನಲ್ಮ್ ಯೋಜನೆಯಡಿ ನೋಂದಾಯಿತ ಎಸ್‌ಹೆಚ್‌ಜಿ ಅರ್ಹ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಎಸ್‌ಹೆಚ್‌ಜಿ ಅರ್ಹ ಸದಸ್ಯರು ಸ್ವ–ಸಹಾಯ ಗುಂಪಿನ ಸದಸ್ಯರು ಆಗಿರಬೇಕು. (ಗುಂಪಿನ ಪಾಸ್ ಬುಕ್,) ಆಧಾರ ಕಾರ್ಡ್, ಗುರುತಿನ ಚೀಟಿ, ರೇಷನ್ ಕಾರ್ಡ್, 10ನೇ ತರಗತಿಯಲ್ಲಿ ಪಾಸ್ ಆಗಿರಬೇಕು, ಡೇ–ನಲ್ಮ್ ಎಂ.ಐ.ಎಸ್ ಎಸ್‌ಹೆಚ್‌ಜಿ ನೋಂದಾಣಿಯಾದವರು ಅರ್ಜಿ ನಮೂನೆಯನ್ನು ಕಚೇರಿಯ ಆರೋಗ್ಯ ಶಾಖೆ ಅಥವಾ ಡೇ–ನಲ್ಮ್ ಶಾಖೆಯಿಂದ ಪಡೆದುಕೊಂಡು ಜೂನ್ 29ರ ಸಂಜೆ 5 ಗಂಟೆಯೊಳಗಾಗಿ ಮಹಾನಗರ ಪಾಲಿಕೆ ಜೋನಲ್ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೀನುಗಾರಿಕೆ ಇಲಾಖೆಯಿಂದ ಪರವಾನಿಗೆ ಅರ್ಜಿ ಆಹ್ವಾನ

**ರಾಯಚೂರು,ಮೇ.29–** ಇಲ್ಲಿನ ಮೀನುಗಾರಿಕೆ ಇಲಾಖೆಯಿಂದ ಜಿಲ್ಲೆಯ ಮಾನವಿ ತಾಲ್ಲೂಕಿನ ತುಂಗಾಭದ್ರಾ ನದಿಭಾಗದಲ್ಲಿ ಮೀನು ಹಿಡಿಯಲು ಪರವಾನಿಗೆಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತುಂಗಾಭದ್ರಾ ನದಿಭಾಗದ ಆಯನೂರ ನಿಂದ ದದ್ದಲ್‌ವರೆಗೆ ಮೀನು ಹಿಡಿಯಲು ಪರವಾನಿಗೆಗಾಗಿ ಸ್ಥಳೀಯ ಮೀನುಗಾರರು ವಾಸಸ್ಥಳ ಗುರುತಿನ ಚೀಟಿಯೊಂದಿಗೆ ನಿಗದಿತ ಶುಲ್ಕ ಪಾವತಿಸಿ ಜೂನ್ 92ರಿಂದ ಜೂನ್ 30ರ ಪರವಾನಿಗೆಯನ್ನು ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರು ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಮಿಕರ ಅಭಿವೃದ್ಧಿಗಾಗಿ ಪ್ರಾಮಾಣಿಕ ಪ್ರಯತ್ನ




**ಗುರುಮಠಕಲ್:ಮೇ.29–**ಸಮಾಜದ ವಿವಿಧ ರಂಗಗಳಲ್ಲಿ ಕೆಲಸಮಾಡುವ ಕಾರ್ಮಿಕರು ದೈನಂದಿನ ದುಡಿಮೆಯ ಜೊತೆಗೆ ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಿ ಉನ್ನತ ಶಿಕ್ಷಣ ಪಡೆಯಲು ಶ್ರಮಿಸುವಂತೆ ಶಾಸಕ ಶರಣಗೌಡ ಕಂದಕೂರ ಹೇಳಿದರು. ಪಟ್ಟಣದ ಶಾಸಕರ ಜನ ಸಂಪರ್ಕ ಕಛೇರಿಯಲ್ಲಿ ಕಾರ್ಮಿಕ ಇಲಾಖೆವತಿಯಿಂದ ಕಟ್ಟಡ ಕಾರ್ಮಿಕರು ಮತ್ತು ಇತರೆ ಕಾರ್ಮಿಕರ ಸಂಚಾರಿ ಆರೋಗ್ಯ ಘಟಕದ ಉದ್ಘಾಟನೆ ಹಾಗೂ ಕಟ್ಟಡ ಮೇಸ್ತ್ರಿ ಮತ್ತು ಇಲೆಕ್ಟ್ರಿಷಿಯನ್ ಗಳಿಗೆ ಕಿಟ್ ವಿತರಿಸಿ ಮಾತನಾಡಿದ ಅವರು,ಪ್ರತಿ ಕ್ಷೇತ್ರದ ಅಭಿವೃದ್ಧಿಗೆ ಕಾರ್ಮಿಕರ ಪಾತ್ರ ಮಹತ್ವದ್ದಾಗಿದೆ. ಸರಕಾರದಿಂದ ಸಂಘಟಿತ ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಅನೇಕ ಸವಲತ್ತು ಸೌಲಭ್ಯಗಳನ್ನು ನೀಡಲಾಗಿದೆ.ಅವರ ಆರೋಗ್ಯದ ರಕ್ಷಣೆಗಾಗಿ ವಿಶೇಷ ಅಂಬ್ಯುಲೆನ್ಸ ಸಹ ನೀಡಲಾಗಿದೆ. ಕಾರ್ಮಿಕರು ತಮ್ಮ ಕುಟುಂಬ ನಿರ್ವಹಣೆ ಜೊತೆಗೆ ತಮ್ಮ ಮಕ್ಕಳ ಉನ್ನತ ಶಿಕ್ಷಣಕ್ಕೆ ಹೆಚ್ಚಿನ ಗಮನ ನೀಡುವಂತೆ ಹೇಳಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಹರಿ ದೇಶಪಾಂಡೆ ಮಾತನಾಡಿ,ಕಾರ್ಮಿಕರ ಕುರಿತು ಶಾಸಕ ಶರಣಗೌಡ ಕಂದಕೂರ ಅವರ ವಿಶೇಷ ಕಾಳಜಿಯ ಪರಿಣಾಮವಾಗಿ ನೊಂದಣಿಯಾದ ಕಾರ್ಮಿಕರಿಗೆ ಜ್ಯೇಷ್ಠತೆಯ ಆಧಾರದ ಮೇಲೆ ಕಿಟ್ ಗಳನ್ನು ವಿತರಿಸಲಾಗಿದೆ ಎಂದರು. ಸಭೆಯಲ್ಲಿ ಕಾರ್ಮಿಕ ನಿರೀಕ್ಷಕ ಸಂಗೀತಾ ಹೊನ್ನೂರ,ಶಿವರಾಜ ಸೇರಿದಂತೆ ಪುರಸಭೆ ಅಧ್ಯಕ್ಷೆ ಜಯಶ್ರೀ ರಘುನಾಥರೆಡ್ಡಿ ಪಾಟೀಲ್,ಸೇರಿದಂತೆ ಪುರಸಭೆ ಸದಸ್ಯರಾದ ಬಾಲಪ್ಪ ದಾಸರಿ,ನರಸಪ್ಪ ಗಡ್ಡಲ್,ಮತ್ತು ಮುಖಂಡರಾದ ರಘುನಾಥರೆಡ್ಡಿ ಪಾಟೀಲ್,ಶರಣು ಅವಂಟಿ,ಪ್ರಕಾಶ ನೀರಟ್ಟಿ,ಹಾಗೂ ವಿವಿಧ ವೃತ್ತಿಯ ಕಾರ್ಮಿಕರು ಇದ್ದರು.

**ಸಂತೋಷ ಲಾಡ್ ಗೆ ಅಭಿನಂದನೆ:**

ರಾಜ್ಯ ಸಚಿವ ಸಂಪುಟದಲ್ಲಿ ತಮ್ಮದೇ ಆದ ವಿಶೇಷ ಸ್ಥಾನಮಾನ ಹೊಂದಿದ ಕಾರ್ಮಿಕ ಸಚಿವ ಸಂತೋಷ ಲಾಡ್ ಅವರು ಕಾರ್ಮಿಕರ ಅಭಿವೃದ್ಧಿಗಾಗಿ ಗುರುಮಠಕಲ್ ತಾಲೂಕನ್ನು ಆಯ್ಕೆ ಮಾಡಿ ಗಡಿಭಾಗದ ಕಾರ್ಮಿಕರ ಆರೋಗ್ಯಕ್ಕಾಗಿ ಸಂಚಾರಿ ವಾಹನ ಸೌಲಭ್ಯ ಕಲ್ಪಿಸಿದ ಸಚಿವ ಸಂತೋಷ ಲಾಡ್ ಅವರ ಸಹಕಾರಕ್ಕೆ ಕಿಟ್ ವಿತರಣಾ ಸಭೆಯಲ್ಲಿ ಶಾಸಕ ಶರಣಗೌಡ ಕಂದಕೂರ ಅವರು ಧನ್ಯವಾದಗಳನ್ನು ಅರ್ಪಿಸಿದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**